EMAIL : dairyadadaari@gmail.com ಸಂಪುಟ: 01 ಸಂಚಿಕೆ: 10

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಶನಿವಾರ: 13-12-2025



ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


## ಎಸ್‌ಸಿ/ಎಸ್‌ಟಿ ಅನುದಾನ ದುರ್ಬಳಕೆ ಆರೋಪ

# ವಿಧಾನ ಪರಿಷತ್‌ನಲ್ಲಿ ವಾಕ್ಸಮರ

**ಬೆಳಗಾವಿ,ಡಿ.12–** ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಿಟ್ಟ 50 ಸಾವಿರ ಕೋಟಿ ಅನುದಾನ ದುರುಪಯೋಗವಾಗಿದೆ ಎಂದು ಆಡಳಿತ ಪಕ್ಷದ ಸದಸ್ಯರು ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ ಪ್ರಸಂಗ ವಿಧಾನಪರಿಷತ್‌ನಲ್ಲಿ ನಡೆಯಿತು. ಇದನ್ನೆ ಅಸ್ತ್ರವನ್ನಾಗಿಟ್ಟುಕೊಂಡು ಪ್ರತಿಪಕ್ಷ ಬಿಜೆಪಿ ಸದಸ್ಯರು ಈ ಪ್ರಕರಣವನ್ನು ಎಸ್‌ಐಟಿ ರಚನೆ ಮಾಡಿ ತನಿಖೆಗೆ ಆದೇಶ ನೀಡಬೇಕೆಂದು ಆಗ್ರಹಿಸಿದರು.

ಈ ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ಭಾರೀ ಮಾತಿನ ಚಕಮಕಿ ನಡೆದು ಸದನದಲ್ಲಿ ಒಂದು ಕ್ಷಣ ಕಾವೇರಿದ ವಾಕ್ಸಮರವೂ ನಡೆಯಿತು.ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ಎನ್.ಎಚ್.ಜಕ್ಕಪ್ಪನವರ್, ಗ್ರಾಮ ಪಂಚಾಯಿತಿಗಳಲ್ಲಿ ಎಸ್‌ಸಿ, ಎಸ್‌ಟಿ ವರ್ಗಗಳಿಗೆ ಮೀಸಲಿಟ್ಟ ಅನುದಾನದ ಮೊತ್ತ ಗ್ರಾಮಸಭೆ ಸೇರಿದಂತೆ ಇತರ ವಿಷಯಗಳ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆಯವರನ್ನು ಪ್ರಶ್ನೆ ಮಾಡಿದರು.

ಸಚಿವರ ಪರವಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಉತ್ತರಿಸುವ ಮೊದಲೇ ಸುದೀರ್ಘವಾಗಿ ಮಾತನಾಡಿದ ಜಕ್ಕಪ್ಪನವರ್, ಗ್ರಾಮ ಪಂಚಾಯಿತಿಗಳಲ್ಲಿ ಎಸ್‌ಸಿ/ಎಸ್‌ಟಿ



ಸಮುದಾಯದ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನವನ್ನು ಸರಿಯಾಗಿ ಬಳಕೆ ಮಾಡುತ್ತಿಲ್ಲ. ಗ್ರಾಮಸಭೆಗಳನ್ನು ಸಹ ಕರೆದಿಲ್ಲ. ಈ ಸಮುದಾಯದ ಬಗ್ಗೆ ಇಷ್ಟೊಂದು ನಿರ್ಲಕ್ಷ್ಯ ಏಕೆ ಎಂದು ಸರ್ಕಾರದ ವಿರುದ್ಧವೇ ಹರಿಹಾಯ್ದರು.

ಎಸ್‌ಸಿ/ಎಸ್‌ಟಿ ಸಮುದಾಯ ಸಂವಿಧಾನಬದ್ಧವಾದ ಮೀಸಲಾತಿಯನ್ನು ಸದ್ಬಳಕೆ ಮಾಡಿಕೊಂಡು ಇತರರಂತೆ ಮುಂದೆ ಬರಬೇಕೆಂಬುದು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಕನಸಾಗಿತ್ತು.ಸರ್ಕಾರ ಅನುದಾನವನ್ನು ಮೀಸಲಿಟ್ಟಿದ್ದರೂ ಏಕೆ ಸದ್ಬಳಕೆಯಾಗುತ್ತಿಲ್ಲ ಗ್ರಾಮ ಪಂಚಾಯಿತಿ ಸಭೆ ಕರೆಯಲು ಇರುವ ಸಮಸ್ಯೆಯಾದರೂ ಏನು ಎಂದು ಪ್ರಶ್ನಿಸಿದರು.

ನನಗಿರುವ ಮಾಹಿತಿ ಪ್ರಕಾರ, ಈ ಎರಡೂ ಸಮುದಾಯದ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ ಅನುದಾನದಲ್ಲೆ ಗೋಲ್‌ಮಾಲ್ ಆಗಿದೆ. ಅಂದಾಜು 50 ಸಾವಿರ ಕೋಟಿ ಹಣ ದುರ್ಬಳಕೆಯಾಗಿದೆ ಎಂದು ಆರೋಪಿಸಿದರು.

ಸದಸ್ಯರು ಈ ಆರೋಪ ಮಾಡುತ್ತಿದ್ದಂತೆ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸದಸ್ಯರಾದ ರವಿಕುಮಾರ್, ಪೂಜಾರ್, ಹೇಮಲತಾ ನಾಯಕ್ ಮತ್ತಿತರರು ಇದು ಗಂಭೀರವಾದ ಆರೋಪ. ಸರ್ಕಾರದ ಮೇಲೆಯೇ ಸದಸ್ಯರೊಬ್ಬರು ಇಷ್ಟು ದೊಡ್ಡ ಮೊತ್ತದ ಭ್ರಷ್ಟಾಚಾರದ ಆರೋಪ ಮಾಡಿದ್ದಾರೆ. ತಕ್ಷಣವೇ ಇದನ್ನು ತನಿಖೆಗೆ ವಹಿಸಿ ಎಂದು ಒತ್ತಾಯಿಸಿದರು.

ಆಗ ಸದಸ್ಯರ ಪರವಾಗಿ ಎದ್ದು ನಿಂತ ಸದಸ್ಯ ಶಿವಕುಮಾರ್‌ರವರು, ಸದಸ್ಯರು ಈ ಸರ್ಕಾರದ ಅವಧಿಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪ ಮಾಡಿಲ್ಲ. ಕಳೆದ 10 ವರ್ಷಗಳ ಅವಧಿಯಲ್ಲಿ ಆಗಿದೆ ಎಂದು ಹೇಳಿದ್ದಾರೆ. 2015 ರಿಂದಲೂ ಇದು ನಡೆದಿದೆ ಎಂಬುದು 2ನೇಪುಟಕ್ಕೆ►

## ಬೆಳಗಾವಿಯಲ್ಲಿ ಕೈಗಾರಿಕಾ ಪಾರ್ಕ್ ಸ್ಥಾಪನೆ : ಸಚಿವ ಎಂ.ಬಿ.ಪಾಟೀಲ್



**ಬೆಳಗಾವಿ, ಡಿ.12–** ಬೆಳಗಾವಿಯಲ್ಲಿ ಕೈಗಾರಿಕಾ ಪಾರ್ಕ್ ಸ್ಥಾಪನೆ ಮಾಡಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ವಿಧಾನಸಭೆಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಶಾಸಕರ ಅರವಿಂದ ಬೆಲ್ಲದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪಾರ್ಕ್ ಸ್ಥಾಪನೆ ಸಂಬಂಧ ಈಗಾಗಲೇ ಸಾಕಷ್ಟು ಸಿದ್ಧತೆಗಳು ನಡೆದಿವೆ ಎಂದರು.

ಬೆಂಗಳೂರು-ಮುಂಬೈ ಕೈಗಾರಿಕಾ ಕಾರಿಡಾರ್‌ಗೆ ಸಂಬಂಧಿಸಿದಂತೆ 300 ಎಕರೆ ಒದಗಿಸಲಾಗಿದೆ. ಏರೋಸ್ಪೇಸ್ ಡಿಫೆನ್ಸ್ ಕಾರಿಡಾರ್ ಸ್ಥಾಪನೆಗೆ ಕೇಂದ್ರ ಸರ್ಕಾರಕ್ಕೆ ಒತ್ತಾಯ ಮಾಡುತ್ತಿದ್ದೇವೆ. 2ನೇಪುಟಕ್ಕೆ►

## ವಸತಿ ಶಾಲೆಯಲ್ಲಿ ವಿವಿಧ ಕಾಯ್ದೆಗಳ ಅರಿವು ಕಾರ್ಯಕ್ರಮ



ಧೈರ್ಯದ ದಾರಿ

**ರಾಯಚೂರು,ಡಿ.12–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ವತಿಯಿಂದ ಸಿರವಾರ ತಾಲೂಕಿನ ನವಲಕಲ್ ಶ್ರೀ ಮತಿ ಇಂದಿರಾಗಾಂಧಿ ವಸತಿ ಶಾಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳು ಮತ್ತು ಕಾಯ್ದೆಗಳ ಕುರಿತು ಜಾಗೃತಿ ಕಾರ್ಯಕ್ರಮವು ಇತ್ತೀಚೆಗೆ ನಡೆಯಿತು.

ಈ ವೇಳೆ ಮಿಷನ್ ಶಕ್ತಿ ಯೋಜನೆಯ ಜಿಲ್ಲಾ ಸಂಯೋಜಕರಾದ ಬಾವಸಲಿ ಅವರು ಮಾತನಾಡಿ, ಲೈಂಗಿಕ ಹಿಂಸೆಯಿಂದ ಮಹಿಳೆಯರನ್ನು ಸಂರಕ್ಷಣೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸಮಾಜದಲ್ಲಿ ಹೆಣ್ಣು-ಗಂಡು ಎಂಬ ಭೇದ-ಭಾವ ದೂರುವಾಗಬೇಕು. ಗಂಡು ಹೆಣ್ಣು ಇಬ್ಬರು ಸಮಾನರು ಎನ್ನುವ ಭಾವನೆಯು ಪ್ರತಿಯೊಬ್ಬರಲ್ಲೂ ಬರಬೇಕು. ಸಾಮಾಜಿಕ ಪಿಡುಗುಗಳಾದ ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ದೇವದಾಸಿ ಪದ್ಧತಿ ಇವೆಲ್ಲ ದೂರುವಾಗಬೇಕೆಂದರು.

ಬಾಲ್ಯ ವಿವಾಹ ವಿರುದ್ಧ ಕಠಿಣ ಕಾನೂನು ಇದೆ. 'ಮೊಬೈಲ್ ಬಿಡಿ ಪುಸ್ತಕ ಹಿಡಿ' ಎನ್ನುವ ವಿಧಾನ ಅನುಸರಿಸಿದಲ್ಲಿ ನಮ್ಮ ಜೀವನವು ಉತ್ತಮವಾಗಿ ರೂಪುಗೊಳ್ಳಲು ಸಾಧ್ಯವಿದೆ. ನಿರಂತರ ಪ್ರಯತ್ನವೆ ಯಶಸ್ಸಿನ ಗುಟ್ಟು ಆಗಿದೆ. ನೊಂದ ಮಹಿಳೆಯರು ಹಾಗೂ ವಿದ್ಯಾರ್ಥಿನಿಯರಿಗೆ 181 ಮಹಿಳಾ ಸಹಾಯವಾಣಿ, 1098 ಮಕ್ಕಳ ಸಹಾಯವಾಣಿ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಶ್ರೀ ಮತಿ ಇಂದಿರಾಗಾಂಧಿ ವಸತಿ ಶಾಲೆಯ ಪ್ರಾಂಶುಪಾಲರಾದ ಲಿಂಗರಾಜ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಹಿರಿಯ ಮೇಲ್ವಿಚಾರಕರಾದ ನಾಗಮ್ಮ. ಹೆಚ್ ಸೇರಿದಂತೆ ವಸತಿ ಶಾಲೆಯ ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಮೂಲಭೂತ ಸೌಕರ್ಯಗಳಿಲ್ಲದೆ ನರಕಸದೃಶವಾದ ಮಾನ್ವಿ ಪಟ್ಟಣದ ಅಲ್ಲಾವಲಿ ಲೇಔಟ್: ಅಧಿಕಾರಿಗಳ ವಿರುದ್ಧ ಸಾರ್ವಜನಿಕರ ಆಕ್ರೋಶ

ಧೈರ್ಯದ ದಾರಿ

**ಮಾನ್ವಿ,ಡಿ.12–** ಪಟ್ಟಣದ ವಾರ್ಡ್ ನಂಬರ್ 2, ಅಲ್ಲಾವಲಿ ಲೇಔಟ್ ನಿವಾಸಿಗಳ ಬದುಕು ಇಂದು ಹಸಿಗೆಟ್ಟಿದೆ. ಕನಿಷ್ಠ ಮೂಲಭೂತ ಸೌಕರ್ಯಗಳೂ ಇಲ್ಲದೆ ಇಲ್ಲಿನ ಜನರು ನರಕಯಾತನೆ ಅನುಭವಿಸುತ್ತಿದ್ದರೂ, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಮಾತ್ರ ಗಾಢ ನಿದ್ರೆಗೆ ಜಾರಿದಂತೆ ಕಾಣುತ್ತಿದೆ.

ಪುರಸಭೆ ಅಧಿಕಾರಿ ಪರಶುರಾಮ್ ದೇವಾಮನೆ ಅವರಿಗೆ ಲೇಔಟ್‌ನ ಸಮಸ್ಯೆಗಳ ಕುರಿತು ಹಲವು ಬಾರಿ ಪುರಸಭೆಗೆ ಅಲೆದು ಮಾಹಿತಿ ನೀಡಿದರೂ, ಈ ಅಧಿಕಾರಿ ಮಾತ್ರ "ಕಣ್ಣಿದ್ದೂ ಕುರುಡರಂತೆ" ವರ್ತಿಸುತ್ತಿದ್ದಾರೆ ಎಂದು ಸ್ಥಳೀಯರು ದೂರಿದ್ದಾರೆ. ಪ್ರತಿ ಬಾರಿ ಮನವಿ ಸಲ್ಲಿಸಿದಾಗಲೂ ಕೇವಲ ಆಶ್ವಾಸನೆ ನೀಡಿ ಕೈತೊಳೆದುಕೊಳ್ಳುತ್ತಿದ್ದಾರೆ.

ಲೇಔಟ್‌ನಲ್ಲಿ ರಸ್ತೆಗಳೇ ಇಲ್ಲದಂತಾಗಿದ್ದು, ಗುಂಡಿ ಬಿದ್ದ ಹಾದಿಯಲ್ಲಿ ಜೀವ ಕೈಯಲ್ಲಿಟ್ಟುಕೊಂಡು ಸಂಚಾರಿಸುತಿದ್ದೇವೆ ಚರಂಡಿಗಳಿಲ್ಲದೆ ಕೊಳಚೆ ನೀರು ರಸ್ತೆಯಲ್ಲೇ ಹರಿಯುತ್ತಿದ್ದು, ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದೆ ಸಮರ್ಪಕ ನೀರು ಸರಬರಾಜು ಇಲ್ಲದೆ ನಿವಾಸಿಗಳು ದಿನನಿತ್ಯ ಪರದಾಡುವಂತಾಗಿದೆ. ಚುನಾವಣೆಯ ಸಮಯದಲ್ಲಿ ಮತ ಕೇಳಲು ಮನೆ ಬಾಗಿಲಿಗೆ ಬರುವ ಶಾಸಕರು ಮತ್ತು ಸಚಿವರು, ಗೆದ್ದ ಮೇಲೆ ನಮ್ಮ ವಾರ್ಡ್ ಕಡೆ ತಿರುಗಿಯೂ ನೋಡುತ್ತಿಲ್ಲ. ಅಧಿಕಾರಿಗಳು ನಮ್ಮ ಮಾತಿಗೆ ಬೆಲೆ ಕೊಡುತ್ತಿಲ್ಲ, ಶಾಸಕರು ನಮ್ಮ ಅಳಲು ಕೇಳುತ್ತಿಲ್ಲ. ನಮ್ಮ ಸಮಸ್ಯೆಗಳನ್ನು ನಾವು ಇನ್ಯಾರಿಗೆ ಹೇಳಬೇಕು?" ಎಂದು ಅಲ್ಲಾವಲಿ ಲೇಔಟ್‌ನ ನಿವಾಸಿಗಳು ತಮ್ಮ ಗೋಳನ್ನು





ತೋಡಿಕೊಂಡಿದ್ದಾರೆ.

ಜನರ ತೆರಿಗೆ ಹಣದಲ್ಲಿ ಸಂಬಳ ಪಡೆಯುವ ಅಧಿಕಾರಿಗಳು ಮತ್ತು ಜನರ ಮತದಿಂದ ಆಯ್ಕೆಯಾದ ಜನಪ್ರತಿನಿಧಿಗಳು ಕೂಡಲೇ ಎಚ್ಚೆತ್ತುಕೊಳ್ಳಬೇಕು. ಅಲ್ಲಾವಲಿ ಲೇಔಟ್‌ನ ಸಮಸ್ಯೆಗಳನ್ನು ಕೂಡಲೇ ಬಗೆಹರಿಸದಿದ್ದರೆ, ಪುರಸಭೆ ಕಚೇರಿಗೆ ಮುತ್ತಿಗೆ ಹಾಕಿ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ನಿವಾಸಿಗಳು ಎಚ್ಚರಿಸಿದ್ದಾರೆ

## ಪ್ರಾಚೀನರ ಸಾವಯವ ಕೃಷಿಯನ್ನು ಮರಳಿ ಗ್ರಾಮಗಳಲ್ಲಿ ತರಬೇಕಾಗಿದೆ :ಡಾ.ಎಂ.ಬಸವಣ್ಣೇಪ್ಪ

ಧೈರ್ಯದ ದಾರಿ

**ಮಾನ್ವಿ,ಡಿ.12–**ತಾಲೂಕಿನ ತಮ್ಮಾಪುರ ಗ್ರಾಮದಲ್ಲಿನ ಶ್ರೀ ರೇಣುಕಾ ಎಲ್ಲಮ್ಮ ದೇವಿ ಶಕ್ತಿಪೀಠದ ಆವರಣದಲ್ಲಿ ಮಾನ್ವಿಯ ಕಲ್ಮಠ ಪದವಿಪೂರ್ವ ಕಾಲೇಜಿನ ಎನ್.ಎಸ್.ಎಸ್ ಘಟಕದ ವತಿಯಿಂದ ನಡೆದ 2025-26 ನೇ ಸಾಲಿನ ಎನ್.ಎಸ್.ಎಸ್ ವಿಶೇಷ ಶಿಬಿರದ ಕಾರ್ಯಕ್ರಮದಲ್ಲಿ ಸಮಗ್ರ ಸಾವಯವ ಕೃಷಿ ಪದ್ಧತಿ ಕುರಿತು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಾದ ಸಾವಯವ ಕೃಷಿ ವಿಭಾಗದ ಮುಖ್ಯಾಸ್ಥರಾದ ಡಾ.ಎಂ.ಬಸವಣ್ಣೆಪ್ಪ ವಿಶೇಷ ಉಪನ್ಯಾಸ ನೀಡಿ ಭಾರತ ದೇಶ ಕೃಷಿ ಪ್ರಾಧನವಾಗಿರುವ ಕೃಷಿಕರ ದೇಶವಾಗಿದು ನಮ್ಮ ಪ್ರಾಚೀನರ ಸಾವಯವ ಕೃಷಿಯನ್ನು ಮರಳಿ ಗ್ರಾಮಗಳಲ್ಲಿ ತರುವ ,ಮೂಲಕ ಆರೋಗ್ಯ ಪೂರ್ಣವಾದ ಕೃಷಿ ಉತ್ಪನ್ನಗಳನ್ನು ಬೆಳೆಯುವುದಕ್ಕೆ ವಿದ್ಯಾರ್ಥಿಗಳು ರೈತರನ್ನು ಶಿಬಿರದ ಮೂಲಕ ಜಾಗೃತಿ ಮೂಡಿಸಬೇಕು ರೈತರು ಕೇವಲ ವಾಣಿಜ್ಯ ಕೃಷಿಗೆ ಹೆಚ್ಚಿನ





ಅದ್ಯತೆಯನ್ನು ನೀಡದೆ ಸಮಗ್ರವಾದ ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಿದಲ್ಲಿ ರೈತರ ಕೃಷಿ ವೆಚ್ಚದಲ್ಲಿ ಗಣನಿಯವಾದ ಕಡಿತವಾಗುವುದಲ್ಲದೆ ರೈತರು ಕೃಷಿಯಲ್ಲಿ ಸ್ವಾವಲಂಬನೆ ಸಾಧಿಸುವುದಕ್ಕೆ ಸಾಧ್ಯವಾಗುತ್ತದೆ 2ನೇಪುಟಕ್ಕೆ►

## ಜೋಳ ಬೆಳೆದ ರೈತರ ಜಮೀನುಗಳನ್ನು ಜಿ.ಪಿ.ಎಸ್. ಮಾಡಿ: ಚಾಮರಸ ಮಾಲೀ ಪಾಟೀಲ್

ಧೈರ್ಯದ ದಾರಿ



**ಮಾನ್ವಿ,ಡಿ.12–** ಪಟ್ಟಣದ ಶಾಸಕರ ಭವನದ ಆವರಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ತಾಲೂಕು ಘಟಕವತಿಯಿಂದ ತಹಸೀಲ್ದಾರ್ ರವರಿಗೆ ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್ ರವರ ಮೂಲಕ ಮನವಿ ಸಲ್ಲಿಸಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲೀ ಪಾಟೀಲ್ ಮಾತನಾಡಿ ತಾಲೂಕಿನಲ್ಲಿ ಜೋಳ ಬೆಳೆದ ರೈತರ ಜಮೀನುಗಳನ್ನು ಜಿ.ಪಿ.ಎಸ್. ಮಾಡಿ ಬೆಂಬಲ ಬೆಲೆ ಅಡಿಯಲ್ಲಿ ರೈತರಿಂದ ಜೋಳವನ್ನು ಖರೀದಿ ಮಾಡುವುದಕ್ಕೇ ಕೂಡಲೆ ನೊಂದಾಣಿ ಪ್ರಾರಂಭಿಸಬೇಕು , ತಾಲೂಕಿನಲ್ಲಿ ರೈತರ ಅನುಕೂಲಕ್ಕೆ ತಕ್ಕಂತೆ ಜೋಳ,ಭತ್ತ,ತೊಗರಿ ಖರೀದಿಗೆ ಅಗತ್ಯ ಸಂಖ್ಯೆಯಲ್ಲಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಬೇಕು, ಹತ್ತಿ ಬೆಳೆದ ರೈತರು ಖರೀದಿ ಕೇಂದ್ರಗಳಲ್ಲಿ ಮಾರಾಟಕ್ಕೆ ಇರುವ ತೊಂದರೆಗಳನ್ನು ನಿವಾರಿಸಬೇಕು ಹಾಗೂ ನೊಂದಾಣಿಯಲ್ಲಿ ಇರುವಂತ ಸಮಸ್ಯೆಗಳನ್ನು ಸರಿಪಡಿಸಬೇಕು.ಗ್ರಾಮೀಣ ಭಾಗದ ರಸ್ತೆಗಳು ಹಾಳಗಿದ್ದು ಅವುಗಳನ್ನು ಸರಿಪಡಿಸಬೇಕು.ವಿದ್ಯುತ್ ತೊಂದರೆಗಳನ್ನು ನಿವಾರಿಸಬೇಕು, ಮಾನ್ವಿ ಪಟ್ಟಣದಲ್ಲಿ ಕೃಷಿ ಉತ್ಪನ್ನ ಕೇಂದ್ರದಿಂದ ನಡೆಯುತ್ತಿದ ಜಾನುವಾರುಗಳ ಮಾರಾಟದ ಸಂತೆ ರದ್ದಾಗಿರುವುದರಿಂದ ರೈತರು ಜಾನುವಾರುಗಳನ್ನು ಖರೀದಿಸುವುದಕ್ಕೆ ಹಾಗೂ ಮಾರಾಟ ಮಾಡುವುದಕ್ಕೆ ತೊಂದರೆಯಾಗಿರುವುದರಿಂದ ಕೂಡಲೆ ದನ ಮತ್ತು ಕುರಿ ಸಂತೆಯನ್ನು ಪ್ರಾರಂಭಿಸಬೇಕು ಎಂದು ಒತ್ತಾಯಿಸಿದರು.

ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್ ಮನವಿ ಸ್ವೀಕರಿಸಿ ಮಾತನಾಡಿ ರೈತರ ಸಮಸ್ಯೆಗಳ ನಿವಾರಣೆಗಾಗಿ ಸಂಬಂದಿಸಿದ ಇಲಾಖೆಯ ಅಧಿಕಾರಿಗಳ ಹಾಗೂ ರೈತ ಸಂಘದ ಪ್ರಾತಿನಿಧಿಗಳ ಸಭೆಯನ್ನು ನಡೆಸಿ ಪರಿಹಾರ ಕಂಡು ಕೊಳ್ಳಲಾಗುವುದು ಎಂದು ಬರವಸೆ ನೀಡಿದರು.

ಪಟ್ಟಣದ ಶಾಸಕರ ಭವನದ ಆವರಣದಲ್ಲಿ ಬೆಳ್ಳಿಗೆ ಯಿಂದ ನೂರಾರು ರೈತರು ವಿವಿಧ ಬೇಡಿಕೆಗಳ ಈಡೆರಿಕೆಗಾಗಿ ಪ್ರತಿಭಟನೆ ನಡೆಸಿ ನಂತರ ಸ್ಥಳಕ್ಕೆ ಆಗಮಿಸಿದ ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್ ಹಾಗೂ ಕೃಷಿ ಇಲಾಖೆಯ ತಾ.ಸಹಾಯಕ ನಿರ್ದೇಶಕರಾದ ಗುರುನಾಥ ಭೂಸನೂರ್ ರವರಿಗೆ ಮನವಿ ಸಲ್ಲಿಸಿದರು.

ರಾಜ್ಯ ಉಪಾಧ್ಯಕ್ಷರಾದ ದೊಡ್ಡಬಸವನಗೌಡ ಬಲ್ಲಟ್ಟಗಿ, ರಾಜ್ಯ ಕಾರ್ಯದರ್ಶಿ ಗಳಾದ ಯಂಕಪ್ಪ ಕಾರಬಾರಿ, ಸೂಗುರಯ್ಯ ಆರ್.ಎಸ್.ಮಠ,ಬಸವರಾಜ ಮಾಲಿ ಪಾಟೀಲ್, ಬೂದಯ್ಯಸ್ವಾಮಿ ಸಿದ್ದಯ್ಯಸ್ವಾಮಿ ಗೋರ್ಕಲ್, ಮಲ್ಲಣ್ಣದಿನ್ನಿ, ಹೆಚ್.ಶಂಕ್ರಪ್ಪ ದೇವತ್ ಗಲ್, ದೇವರಾಜ ನಾಯಕ, ಅಮರೇಸ ಅಲ್ದಾಳ್, ಚಂದ್ರಶೇಖರ ,ಹನುಮಂತ, ದೇವೆಂದ್ರಪ್ಪ, ಶಿವರಾಜ, ಚನ್ನಬಸವ ಗವಿಗಟ್ಟ, ಶರಣಪ್ಪ, ಬ್ರಹ್ಮಯ್ಯ, ನಿಬಿಸಾಬ್, ಹನುಮಂತ.ಎಂ. ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದರು.

## 60 ವರ್ಷ ಹಳೆಯ ಅರಕೇರಾ.ಕೆ ತಾಂಡಾ ಶಾಲೆ ಮುಚ್ಚುವುದಕ್ಕೆ ಪೋಷಕರ ವಿರೋಧ

**ಯಾಗದಿರಿ,ಡಿ.12–** ಕೆಪಿಎಸ್ ಮ್ಯಾಗ್ನೆಟ್ ಶಾಲೆ ಹೆಸರಿನಲ್ಲಿ ರಾಜ್ಯದ 40,000 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚಲು ಮುಂದಾಗಿರುವ ರಾಜ್ಯ ಸರ್ಕಾರದ ವಿರುದ್ಧ ಹಾಗೂ ಯಾದಗಿರಿ ಜಿಲ್ಲೆಯ ಅರಕೇರಾ.ಕೆ ತಾಂಡಾ (ಬಸವನ ತಾಂಡಾ) ದ 6 ದಶಕಗಳ ಇತಿಹಾಸ ಇರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಉಳಿಸಬೇಕು ಎಂದು ತಾಂಡಾದ ಪೋಷಕರು ವಿದ್ಯಾರ್ಥಿಗಳು ಸೇರಿ ಎಐಡಿಎಸ್‌ಒ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು. 2ನೇಪುಟಕ್ಕೆ►



# ಲೊಯೋಲ ಶಾಲೆಯಲ್ಲಿ ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಜಾಗೃತಿ ಕಾರ್ಯಕ್ರಮ




ಧೈರ್ಯದ ದಾರಿ

**ಮಾನ್ವಿ,ಡಿ.12**–ಪಟ್ಟಣದ ಲೊಯೋಲ ಶಾಲೆಯಲ್ಲಿ ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಎಂಬ ಜಾಗೃತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಲೊಯೋಲ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಫಾ. ಪ್ರವೀಣ್ ಕುಮಾರ್ ರವರು ಮಾತನಾಡಿ ಪ್ಲಾಸ್ಟಿಕ್ ಉಪಯೋಗಿಸುವುದರಿಂದ ನಾನಾ ರೀತಿಯ ತೊಂದರೆಗಳು ಉಂಟಾಗುತ್ತವೆ. ತಕ್ಷಣವೇ ಪ್ಲಾಸ್ಟಿಕ್ ರದ್ದು ಮಾಡಲಾಗದಿದ್ದರೂ ನಿಧಾನಗತಿಯಲ್ಲಿ ಹಂತ ಹಂತವಾಗಿ ಪ್ಲಾಸ್ಟಿಕ್ ಪ್ರಮಾಣವನ್ನು ಕಡಿಮೆಗೊಳಿಸುತ್ತ ಪ್ಲಾಸ್ಟಿಕ್ ಮುಕ್ತ ಕ್ಯಾಂಪಸನ್ನಾಗಿ ಪರಿವರ್ತಿಸೋಣ ಎಂದರು.

ಅದೇರೀತಿಯಾಗಿ ಲೊಯೋಲ ಶಾಲೆಯ ನಿರ್ದೇಶಕರಾದ ಫಾ. ಸಿರಿಲ್ ರಾಜ್ ರವರು ಮಾತನಾಡಿ ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಮಾಡಬೇಕೆಂದರೇ ನಾವೆಲ್ಲರೂ ನಮ್ಮ ಸುತ್ತಮುತ್ತಲು ಬಿದ್ದಿರುವ ಪ್ಲಾಸ್ಟಿಕ್ ವಸ್ತುಗಳನ್ನು ಎತ್ತಿಕೊಂಡು ಕಸದ ಡಬ್ಬಿಯಲ್ಲಿ ಹಾಕುವಂತೆ ಪ್ರತಿಜ್ಞೆ ಮಾಡಿಕೊಂಡಾಗ ಮಾತ್ರ ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ ಮಾಡಲು ಸಾಧ್ಯ ಎಂದರು. ಹಾಗೇಯೇ ಸಹಾಯಕ ಮುಖ್ಯೋಪಾಧ್ಯಾಯ ಡೇವಿಡ್ ಕುಮಾರ್ ಮಾತನಾಡಿ ರವರು ಪ್ಲಾಸ್ಟಿಕ್ ಅನ್ನು ಎಲ್ಲೆಂದರಲ್ಲಿ ಹಾಕಿ ಪ್ರಕೃತಿಯನ್ನು ಹಾಳು ಮಾಡುವುದರ ಜೊತೆಗೆ ಪ್ರಾಣಿಗಳು ಆಹಾರಕ್ಕಾಗಿ ಹುಲ್ಲು ತಿನ್ನುವ ಸಂದರ್ಭದಲ್ಲಿ ಪ್ಲಾಸ್ಟಿಕ್ ಸಹ ಹೊಟ್ಟೆಯೊಳಗೆ ಹೋಗಿ ಹಾನಿಯನ್ನುಂಟು ಮಾಡುವ ಸಂದರ್ಭಗಳು ಹೆಚ್ಚುತ್ತವೆ ಎಂದರು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯಿನಿ ಸಿ. ಜೂಲಿಯೇಟ್, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಭಾರತ ದೇಶಕ್ಕೆ ಆತ್ಮ ನಿರ್ಭರತೆ ಅಗತ್ಯ: ಸೋಮನಾಳ



**ವಿಜಯಪುರ, ಡಿ. 12**– ಕೃಷಿ, ರಕ್ಷಣೆ, ಹೊಟೇಲ್ ಉದ್ಯಮ, ಸಾಫ್ಟೇರ್ ಮುಂತಾದ ಪ್ರಮುಖ ಕ್ಷೇತ್ರಗಳಲ್ಲಿ ಭಾರತವು ಆತ್ಮನಿರ್ಭರವಾಗಬೇಕು ಎಂಬುದು ಪ್ರಸ್ತುತ ಅಗತ್ಯವಾಗಿದ್ದು, ಮಹಿಳೆಯರು ದೇಶದ ಆರ್ಥಿಕತೆಯ ಪ್ರಮುಖ ಶಕ್ತಿಯಾಗಬೇಕು ಎಂದು ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಹೇಳಿದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಜೈವಿಕ ಮಾಹಿತಿ ಅಧ್ಯಯನ ವಿಭಾಗ ಹಾಗೂ ಇತಿಹಾಸ ಅಧ್ಯಯನ ವಿಭಾಗದ ಸಹಯೋಗದೊಂದಿಗೆ ಪ್ರಧಾನ ಮಂತ್ರಿ ಉಚ್ಚತರ ಶಿಕ್ಷಾ ಅಭಿಯಾನ ಪಿ. ಎಮ್. ಉಷಾ ಉನ್ನತ ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ ಮತ್ತು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿಯ ನೆರವಿನೊಂದಿಗೆ ಇತ್ತೀಚಿಗೆ ಹಮ್ಮಿಕೊಂಡಿದ್ದ "ಆತ್ಮನಿರ್ಭರ ಭಾರತದಲ್ಲಿ ಮಹಿಳಾ ಉದ್ಯಮಶೀಲತೆ ಅವಕಾಶಗಳು, ಕೌಶಲ್ಯಗಳು ಮತ್ತು ಕಾರ್ಯತಂತ್ರಗಳು" ಕುರಿತ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜೈವಿಕ ಮಾಹಿತಿ, ಜೈವಿಕ ತಂತ್ರಜ್ಞಾನ ಹಾಗೂ ಇತಿಹಾಸ ವಿಭಾಗಗಳ ವಿದ್ಯಾರ್ಥಿನಿಯರು ಈ ತರಬೇತಿಯ ಸದುಪಯೋಗ ಪಡೆದು ತಮ್ಮ ಬದುಕಿನಲ್ಲಿ ಉದ್ಯಮಶೀಲತೆ ಬೆಳೆಸಿಕೊಳ್ಳಬೇಕು, ಅಷ್ಟೇ ಅಲ್ಲದೇ ಕೌಶಲ್ಯಾಭಿವೃದ್ಧಿ ಮೂಲಕ ಮಹಿಳೆಯರು ಹೊಸ ಉದ್ಯಮ ಹಾಗೂ ಉದ್ಯೋಗಾವಕಾಶಗಳನ್ನು ಸೃಷ್ಟಿಸಬಹುದಾದ ಅಪಾರ ಸಾಧ್ಯತೆಗಳಿವೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಡಾ.ಬಸವರಾಜ ಮೇಟಿ ಮಾತನಾಡಿ, ವಿದ್ಯಾರ್ಥಿನಿಯರು ಇಂದಿನ ಯುಗದಲ್ಲಿ ಕೇವಲ ಸರ್ಕಾರಿ ಉದ್ಯೋಗಕ್ಕೆ ಸೀಮಿತವಾಗದೆ ಉದ್ಯಮಿಗಳಾಗಲು ಮುಂದಾಗಬೇಕು. ದೇಶಕ್ಕೆ ಸ್ವಾತಂತ್ರ್ಯ ದೊರೆತು ಏಳು ದಶಕಗಳಾದರೂ, ರಕ್ಷಣಾ ಉತ್ಪಾದನೆ, ಆಹಾರ ಭದ್ರತೆ, ತಂತ್ರಜ್ಞಾನ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ನಾವು ಇನ್ನೂ ಬೇರೆ ದೇಶಗಳ ಮೇಲೆಯೇ ಅವಲಂಬಿತರಾಗಿದ್ದೇವೆ, ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ 'ಆತ್ಮನಿರ್ಭರ ಭಾರತ' ಅಭಿಯಾನವನ್ನು ಆರಂಭಿಸಿದೆ, ಉತ್ತಮ ಕೌಶಲ್ಯಗಳೊಂದಿಗೆ ವಿದ್ಯಾರ್ಥಿನಿಯರು ನವೋದ್ಯಮ ಮತ್ತು ಹೊಸ ಯೋಜನೆಗಳನ್ನು ಪ್ರಾರಂಭಿಸಲು ಧೈರ್ಯದಿಂದ ಮುಂದಾಗಬೇಕೆಂದರು. ಇಂದಿಗೂ ದೇಶದಲ್ಲಿ ಪ್ರಾರಂಭವಾಗಿರುವ ಅನೇಕ ಎಮ್‌ಎಸ್‌ಎಮ್‌ಇಗಳಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಕೇವಲ ಶೇ.12 ರಷ್ಟಿದೆ ಎಂದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕ ಡಾ. ಜಾಯ್. ಹೊಸಕೇರಿ, ಡಾ.ಎಮ್.ಎಸ್. ಮುಜಾವರ, ಡಾ.ಚಂದ್ರಕಲಾ ಹಳ್ಳಿ, ಗುರುರಾಜ ಬಮ್ಮನಹಳ್ಳಿ, ಹಾಗೂ ಸಂಶೋಧನಾ ವಿಧ್ಯಾರ್ಥಿಗಳು, ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ಸಂಯೋಜಕ ಮತ್ತು ಜೈವಿಕ ಮಾಹಿತಿ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ.ಬಾಬು. ಆರ್. ಎಲ್. ಪ್ರಾಸ್ತಾವಿಕ ನುಡಿಗಳನ್ನಾಡಿ, ಸ್ವಾಗತಿಸಿದರು. ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೋ.ನಾಗರಾಜ ಎಮ್. ವಂದಿಸಿದರು. ಸಂಶೋಧನಾ ವಿದ್ಯಾರ್ಥಿನಿ ಆಸ್ಮಾ ಬೇದರೇಕರ ನಿರೂಪಿಸಿದರು.

# ಗೋಟೂರು: ಸಿದ್ಧಾರ್ಥ ಪಿಯು ಕಾಲೇಜಿನ ಎನ್‌ಎಸ್‌ಎಸ್ ಶಿಬಿರ



**ಕಲಬುರಗಿ,ಡಿ.12**– ಶಿಕ್ಷಣ ಜೊತೆಗೆ ಸೇವೆ ಮತ್ತು ಸಮಾಜಕ್ಕಾಗಿ ನಾವು ಎಂಬ ಧ್ಯೆಯೋದ್ದೇಶದೊಂದಿಗೆ ರಾಷ್ಟ್ರ ಕಟ್ಟುವ ಕೆಲಸದಲ್ಲಿ ಎನ್ ಎಸ್ ಎಸ್ ಪ್ರಮುಖ ಪಾತ್ರ ವಹಿಸಿದೆ. ನೈರ್ಮಲ್ಯ,ಶಿಕ್ಷಣ ಆರೋಗ್ಯ, ಕೃಷಿ ಮತ್ತು ಆರ್ಥಿಕ ಕ್ಷೇತ್ರದಲ್ಲಿ ಸಮೃದ್ಧಿ ಹೊಂದಲು ಗ್ರಾಮೀಣ ಜನರಿಗೆ ಜಾಗೃತಿ ಮೂಡಿಸುವ ಕಾರ್ಯದಲ್ಲಿ ವಿದ್ಯಾರ್ಥಿ–ಯುವಜನಾಂಗ ಶ್ರಮಿಸಬೇಕೆಂದು ಎನ್ ಎಸ್ ಎಸ್ ವಿಭಾಗೀಯ ಅಧಿಕಾರಿ ಡಾ. ಚಂದ್ರಶೇಖರ್ ದೊಡ್ಡಮನಿ ಅಭಿಪ್ರಾಯಪಟ್ಟರು.

ಕಾಳಗಿ ಸಿದ್ದಾರ್ಥ ಪದವಿ ಪೂರ್ವ ಕಾಲೇಜಿನ ಎನ್ ಎಸ್ ಎಸ್ ಘಟಕದ ವತಿಯಿಂದ ಗೋಟೂರು ಗ್ರಾಮದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರ ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳು ಪ್ರಜ್ಞೆ ಮತ್ತು ಪರಿಶ್ರಮದಿಂದ ಓದಬೇಕು. ಬಹುಮುಖ ವ್ಯಕ್ತಿತ್ವ ಬೆಳಸಿಕೊಂಡು ವಿದ್ಯಾರ್ಥಿಗಳು ಜ್ಞಾನದ ಚಿಲುಮೆಯಾಗಬೇಕು ಎಂದರು. ಎನ್ ಎಸ್ ಎಸ್ ಶಿಬಿರ ಉದ್ದೇಶಿಸಿ ಗ್ರಾಮ ಪಂಚಾಯತ್ ಅಧ್ಯಕ್ಷ ಶಿವಕುಮಾರ್ ಕಮಕನೂರ, ಪ್ರಭು ಬಾವಿ, ಸಿದ್ದಪ್ಪ ಶೆಟ್ಟಿ ಮುಂತಾದವರು ಮಾತನಾಡಿದರು. ಪ್ರಾಚಾರ್ಯಶಾಂತಕುಮಾರ್ ಪ್ರಾಸ್ತವಿಕವಾಗಿ ಮಾತನಾಡಿದರು. ಸಹಾಯಕ ಪ್ರಾಧ್ಯಾಪಕ ಡಾ. ಶಂಕರ ಬಿ. ಕೊಡದೂರ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಅವಿನಾಶ ಮೂಲಿಮನಿ, ಪರಮೇಶ್ವರ್ ರೆಡ್ಡಿ, ಮಲ್ಲಿಕಾರ್ಜುನ ಸಿಂಗೆ,ಬಾಬು ಬುಡನೋರ, ಸಿಬ್ಬಂದಿ ಹಾಗೂ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.ವಿದ್ಯಾರ್ಥಿಗಳು ಪುಷ್ಪ ವೃಷ್ಟಿವಾಡಿ ಸ್ವಾಗತಿಸಿದರು.ಅರ್ಚನಾ ಕೋರವಾರ ನಿರೂಪಿಸಿದರು.ಪರವಿನಾ ವಂದಿಸಿದರು.

ಮೊದಲನೇ ಪುಟದಿಂದ

# ಎಸ್‌ಸಿ/ಎಸ್‌ಟಿ ಅನುದಾನ ದುರ್ಬಳಕೆ ಆರೋಪ ವಿಧಾನ ಪರಿಷತ್‌ನಲ್ಲಿ ವಾಕ್ಸಮರ

ಅವರ ಆರೋಪ ಎಂದು ಸಮರ್ಥನೆ ಮಾಡಿಕೊಂಡರು. ಆಗ ಪ್ರತಿಪಕ್ಷದ ಸದಸ್ಯರು ಎಸ್‌ಐಟಿ ತನಿಖೆಯಾಗಲೇಬೇಕು, ಇಷ್ಟು ದೊಡ್ಡ ಮಟ್ಟದ ಹಗರಣ ನಡೆಸಿದವರ ಮೇಲೆ ತನಿಖೆಯಾಗಲೇಬೇಕು. ತನಿಖೆಗೆ ಸಭಾಪತಿಯವರು ಸರ್ಕಾರಕ್ಕೆ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.ಈ ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ಮತ್ತೆ ಮಾತಿನ ಚಕಮಕಿ ನಡೆಯಿತು.

ವಿಷಯ ಪ್ರಸ್ತಾಪಿಸಲು ಪುನಃ ಛಲವಾದಿ ನಾರಾಯಣಸ್ವಾಮಿ ಮುಂದಾದಾಗ ಆಡಳಿತ ಪಕ್ಷದ ಮುಖ್ಯ ಸಚೇತಕ ಸಲೀಂ ಅಹಮದ್ ಅವರು ಪ್ರಶ್ನೋತ್ತರ ಅವಧಿಯಲ್ಲಿ ಚರ್ಚೆಗೆ ಅವಕಾಶವಿದೆಯೇ? ಇದ್ದರೆ ಯಾವ ನಿಯಮದಡಿ ಕೊಡುತ್ತಿರಿ ಈ ರೀತಿ ಸದಸ್ಯರು ಸದನದಲ್ಲಿ ವರ್ತಿಸುವುದು ಸರಿಯಲ್ಲ ಎಂದು ಆಕ್ಷೇಪಿಸಿದರು. ಬಳಿಕ ಸಭಾಪತಿಯವರು ಪರಿಸ್ಥಿತಿಯನ್ನು ತಿಳಿಗೊಳಿಸಿದರು.

## ಬೆಳಗಾವಿಯಲ್ಲಿ ಕೈಗಾರಿಕಾ ಪಾರ್ಕ್ ಸ್ಥಾಪನೆ : ಸಚಿವ ಎಂ.ಬಿ.ಪಾಟೀಲ್

ದೇವನಹಳ್ಳಿ ತಾಲ್ಲೂಕಿನಲ್ಲಿ ಕೈಗಾರಿಕೆಗಾಗಿ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡಲಾಗಿದ್ದು, ಅದು ಕೃಷಿವಲಯವಾಗಿದೆ ಎಂದರು.

ಅದು ಜಾಗತಿಕ ಮಟ್ಟದಲ್ಲಿ ಎಕೋಸಿಸ್ಟಮ್ ಹಾಗೂ ಏರೋ ಸಿಸ್ಟಮ್‌ಗೆ ಸಾಕಷ್ಟು ಬೇಡಿಕೆಯಿದೆ. ಬೆಂಗಳೂರು ಗ್ರಾಮಾಂತರ ಹಾಗೂ ಕೋಲಾರ ಭಾಗದಲ್ಲಿ ಏರೋ ಸ್ಪೇಸ್‌ಆಗುವ ಸಾಧ್ಯತೆಗಳು ಇವೆ ಎಂದು ಹೇಳಿದರು.

ಬೆಳಗಾವಿಯಲ್ಲಿ ಎಕೋ ಸಿಸ್ಟಮ್ ಸಾಕಷ್ಟು ಬೆಳೆಯುತ್ತಿದೆ ಎಂದ ಅವರು, ನಗರ ಪ್ರದೇಶದಲ್ಲಿ ಸ್ಥಾಪಿತವಾಗುವ ಕೈಗಾರಿಕೆಗಳಿಗೆ ಉತ್ತೇಜನ ಸಿಗುವುದಿಲ್ಲ .ಆದರೆ ಗ್ರಾಮೀಣ ಭಾಗದಲ್ಲಿ ಸ್ಥಾಪನೆಯಾಗುವ ಕೈಗಾರಿಕೆಗಳಿಗೆ ಶೇ.3ರಿಂದ 5ರಷ್ಟು ಉತ್ತೇಜನ ಸಿಗಲಿದೆ ಎಂದರು

ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿ ತಂದಿದ್ದು, ಎಲ್ಲಾ ರಾಜ್ಯಗಳಿಗಿಂತಲೂ ಉತ್ತಮವಾಗಿದೆ. ಏರೋ ಸ್ಪೇಸ್ ಪಾಲಿಸಿ ವಿಶೇಷವಾಗಿದೆ. ಕ್ಲೀನ್ ಮೊಬಿಲಿಟಿ ನೀತಿಯನ್ನು ಜಾರಿ ಮಾಡಿದ್ದೇವೆ ಎಂದು ಅವರು ಮಾಹಿತಿ ನೀಡಿದರು.

ಇದಕ್ಕೂ ಮುನ್ನ ಮಾತನಾಡಿದ ಅರವಿಂದ ಬೆಲ್ಲದ್ ಅವರು, ರಾಜ್ಯದಲ್ಲಿ 3 ಕಡೆ ಡಿಫೆನ್ ಪಾರ್ಕ್‌ಗೆ ಸ್ಥಳ ಕೇಳುವ ಬದಲು ನಿರ್ದಿಷ್ಟವಾಗಿ ಒಂದು ಕಡೆ ಕೇಳಬೇಕು. ಬೆಂಗಳೂರು ಬಿಟ್ಟು ಹೊರಗಡೆ ಬರುವುದಿಲ್ಲ ಹೀಗಾಗಿ ಬೆಂಗಳೂರು ಹೊರತುಪಡಿಸಿ ಬೇರೆಡೆ ಡಿಫೆನ್ ಪಾರ್ಕ್ ಸ್ಥಾಪಿಸಬೇಕು ಎಂಬ ಸಲಹೆ ನೀಡಿದರು.

# ಪ್ರಾಚೀನರ ಸಾವಯುವ ಕೃಷಿಯನ್ನು ಮರಳಿ ಗ್ರಾಮಗಳಲ್ಲಿ ತರಬೇಕಾಗಿದೆ :ಡಾ.ಎಂ.ಬಸವಣ್ಣೆಪ್ಪ

ಅದ್ದರಿಂದ ರೈತರು ಹೈನುಗಾರಿಕೆ,ಕುರಿ,ಮೇಕೆ,ಆಡು,ಕೋಳಿ ಸಾಕಣಿಕೆಯ ಮೂಲಕ ಹೆಚ್ಚಿನ ಅದಾಯವನ್ನು ಪಡೆಯಬಹುದು ರೈತರಿಗೆ ಹೆಚ್ಚಿನ ಲಾಭ ದೊರೆಯಬೇಕಾದಲ್ಲಿ ತಾವು ಬೆಳೆಯುವ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಗೊಳಿಸಿ ನೇರ ಮಾರುಕಟ್ಟೆ ವ್ಯವಸ್ಥೆಯನ್ನು ರೂಪಿಸಿಕೊಳ್ಳುವುದು ಅವಶ್ಯವಾಗಿದೆ ಈ ನಿಟ್ಟಿನಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ರೈತರಿಗೆ ಅಗತ್ಯ ತಾಂತ್ರಿಕ ಮಾರ್ಗದರ್ಶನವನ್ನು ನೀಡುತ್ತಿದೆ ಎಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ಎಸ್.ಎಸ್. ಪಾಟೀಲ್ ಮಾತನಾಡಿ ಕಾಲೇಜಿನ ವಿದ್ಯಾರ್ಥಿಗಳಿಗೆ ಗ್ರಾಮೀಣ ಭಾಗದ ಜನರ ಜೀವನವನ್ನು ತಿಳಿಸುವುದರ ಜೋತೆಗೆ ಗ್ರಾಮೀಣ ಭಾಗದ ಜನರಿಗೆ ವಿವಿಧ ವಿಷಯಗಳ ಪರಿಣಿತರಿಂದ ,ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ ಕಾರ್ಯಕ್ರಮವನ್ನು ಅಯೋಜಿಸುವ ಮೂಲಕ ಗ್ರಾಮೀಣ ಭಾಗದ ಅಭಿವೃದ್ದಿಗೆ ಕೂಡ ಎನ್.ಎಸ್.ಎಸ್ ವಿಶೇಷ ಶಿಬಿರಗಳು ಸಹಾಯಕವಾಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ರೇಣುಕಾ ಎಲ್ಲಮ್ಮ ದೇವಿ ಶಕ್ತಿಪೀಠದ ಶ್ರೀ ಕುಬೇರಪ್ಪ ಸ್ವಾಮಿಗಳು ಕಾಲೇಜಿನ ಎನ್.ಎಸ್.ಎಸ್ ಘಟಕದ ಕಾರ್ಯಕ್ರಮಾಧಿಕಾರಿ ನರಸಣ್ಣ ನಾಯಕ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಹಂಪಣ್ಣ, ಎಸ್.ಡಿ.ಎಮ್.ಸಿ. ಅಧ್ಯಕ್ಷ ಉರುಕುಂದಪ್ಪ , ಗ್ರಾಮದ ಹಿರಿಯರಾದ ದೊಡ್ಡ ಹುಲಿಗೆಯ್ಯ ವಾಲೆಕರ್ ,ಬಾಲಯ್ಯ, ತಿಮ್ಮಪ್ಪ, ಕಾಲೇಜಿನ ಉಪನ್ಯಾಸಕರಾದ ಮಾರ್ಟಿನ್, ಆನಂದಕುಮಾರ್ , ಸೇರಿದಂತೆ ಇನ್ನಿತರರು ಇದ್ದರು.

# 60 ವರ್ಷ ಹಳೆಯ ಅರಕೇರಾ.ಕೆ ತಾಂಡಾ ಶಾಲೆ ಮುಚ್ಚುವುದಕ್ಕೆ ಪೋಷಕರ ವಿರೋಧ

ಪ್ರತಿಭಟನೆ ಉದ್ದೇಶಿಸಿ ಎಐಡಿಎಸ್‌ಒ ರಾಜ್ಯ ಸಮಿತಿ ಸದಸ್ಯ ನಾಗರಾಜ್ ಮಾತನಾಡುತ್ತಾ ರಾಜ್ಯ ಸರ್ಕಾರವು ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹೆಸರಿನಡಿಯಲ್ಲಿ ರಾಜ್ಯದ ಸರ್ಕಾರಿ ಶಾಲೆಗಳನ್ನು ಮುಚ್ಚುವ ಹುನ್ನಾರ ನಡೆಸಿದೆ ಒಟ್ಟು ರಾಜ್ಯದಲ್ಲಿ 40,000 ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚುವ ಯೋಜನೆ ಇದಾಗಿದೆ.

ಈ ಯೋಜನೆಯಂತೆ ಯಾದಗಿರಿ ತಾಲೂಕಿನ ಅರಕೇರಾ. ಕೆ ಗ್ರಾಮದ ಸರ್ಕಾರಿ ಪ್ರಾಢ ಶಾಲೆಯನ್ನು ಮ್ಯಾಗ್ನೆಟ್ ಶಾಲೆಯೆಂದು ಗುರುತಿಸಿದ್ದು, ಈ ಶಾಲೆಗೆ ಇದರ ಸುತ್ತಮುತ್ತ ಬರುವ ಹಳ್ಳಿಗಳ ಶಾಲೆಗಳನ್ನು ವಿಲೀನಗೊಳಿಸ ಲಾಗುತ್ತದೆ,

ಈ ಕೆಪಿಎಸ್ ಮ್ಯಾಗ್ನೆಟ್ ಶಾಲೆಯು ತಾಂಡಾದಿಂದ ಮೂರರಿಂದ ನಾಲ್ಕು ಕಿಲೋಮೀಟರ್ ದೂರದಲ್ಲಿದೆ ಅಲ್ಲಿಗೆ ಈ ಮಕ್ಕಳು ಹೇಗೆ ಹೋಗಲು ಸಾಧ್ಯ? ಯಾವ ಕಾರಣಕ್ಕೂ ಈ ಶಾಲೆಗಳನ್ನ ಯಾವುದೇ ಕಾರಣಕ್ಕೂ ಮುಚ್ಚಬಾರದೆಂದು ಆಗ್ರಹಿಸಿದರು. ಪ್ರತಿಭಟನೆಯ ಅಧ್ಯಕ್ಷತೆಯನ್ನು ಎಐಡಿಎಸ್ ಒ ಯಾದಗಿರಿ ಜಿಲ್ಲಾ ಸಂಚಾಲಕಿ ಶಿಲ್ಪಾ ಬಿ ಕೆ ವಹಿಸಿದ್ದರು. ಈ ಸಂದರ್ಭದಲ್ಲಿ ಲಕ್ಷ್ಮಣ್, ಅಂಬರೀಷ್, ಹಣಮಂತ ಚವ್ಹಾಣ, ರವಿ ರಾಠೋಡ್, ಅರವಿಂದ ರಾಠೋಡ್, ರಾಮು ಚವ್ಹಾಣ ಹಾಗೂ ಗ್ರಾಮದ ವಿದ್ಯಾರ್ಥಿಗಳು ಮತ್ತು ಪೋಷಕರು ಸೇರಿದಂತೆ 200 ಕ್ಕೂ ಹೆಚ್ಚು ಜನ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಅಪರಾಧ ತಡೆ ಮಾಸಾಚರಣೆ: ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ

ಧೈರ್ಯದ ದಾರಿ



**ಮಾನ್ವಿ,ಡಿ.12**–ಅಪರಾಧ' ತಡೆ ಮಾಸಾಚರಣೆಯ ಪ್ರಯುಕ್ತವಾಗಿ ಮಾನ್ವಿ ಪೊಲೀಸ್ ಠಾಣಾ ವತಿಯಿಂದ ಪಟ್ಟಣದ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಅಪರಾಧ ತಡೆ ಕುರಿತು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಮಾನ್ವಿ ಪೊಲೀಸ್ ಠಾಣೆಯ ಪಿಎಸ್‌ಐ ಅಜ್ಮೀರ್ ಅವರು ಮಾತನಾಡಿ, "ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿರಬೇಕು. ಯಾವುದೇ ರೀತಿಯ ಕೆಟ್ಟ ಚಟುವಟಿಕೆಗಳಿಗೆ ಬಲಿಯಾಗದೆ, ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು. ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಕಾನೂನನ್ನು ಗೌರವಿಸಬೇಕು ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಪೊಲೀಸರಿಗೆ ಸಹಕಾರ ನೀಡಬೇಕು. ಸೈಬರ್ ಅಪರಾಧಗಳ ಬಗ್ಗೆ ವಿದ್ಯಾರ್ಥಿಗಳು ಜಾಗರೂಕರಾಗಿರಬೇಕು" ಎಂದು ಸಲಹೆ ನೀಡಿದರು.ಸಮಾಜದಲ್ಲಿನ ಅಪರಾಧಗಳ ಸ್ವರೂಪ, ಅಪರಾಧಗಳು ಸಂಭವಿಸದಂತೆ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳು ಮತ್ತು ಅಪರಾಧಗಳ ಬಗ್ಗೆ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡುವ ಕುರಿತು ವಿವರವಾಗಿ ತಿಳಿಸಿದರು.

ಎಎಸ್ ಐ ಹನುಮೇಶ್,ಸರ್ವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಮನೋಜ್ ಕುಮಾರ್ ಮಿಶ್ರಾ, ಕಾರ್ಯದರ್ಶಿಗಳು ಅನಿಲಕುಮಾರ್ ಹೆಚ್, ಅಂಜನೇಯ ಹೆಚ್, ಪ್ರಾಚರ್ಯರಾದ ರೇಣುಕಾ, ಶಿವುಕುಮಾರ್ , ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬೆಳಗಾವಿ ಅಧಿವೇಶನದ ಬಳಿಕ ಡಿ.ಕೆ.ಶಿವಕುಮಾರ್ ಸಿಎಂ ಆಗ್ತಾರೆ : ಶಾಸಕ ಇಕ್ಬಾಲ್ ಹುಸೇನ್



**ಬೆಳಗಾವಿ, ಡಿ.12–** ಚಳಿಗಾಲದ ವಿಧಾನ ಮಂಡಲ ಅಧಿವೇಶನದ ಬಳಿಕ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆ ಎಂದು ರಾಮನಗರ ಕ್ಷೇತ್ರದ ಶಾಸಕ ಇಕ್ಬಾಲ್ ಹುಸೇನ್ ಹೇಳಿದ್ದಾರೆ.

ಬೆಳಗಾವಿಯಲ್ಲಿ ನಿನ್ನೆ ಡಿ.ಕೆ.ಶಿವಕುಮಾರ್ ಬಣದ ಪ್ರತ್ಯೇಕ ಔತಣಕೂಟದ ಕುರಿತು ಪ್ರತಿಕ್ರಿಯಿಸಿದ ಅವರು, ಪ್ರೀತಿ ವಿಶ್ವಾಸಕ್ಕಾಗಿ ಊಟಕ್ಕೆ ಸೇರುತ್ತೇವೆ. ಅದನ್ನು ಬಣ ರಾಜಕೀಯ ಎನ್ನುವುದು ಸರಿಯಲ್ಲ ಎಂದರು.

224 ಶಾಸಕರು ಡಿ.ಕೆ.ಶಿವಕುಮಾರ್ ಅವರ ಜೊತೆಯಲ್ಲಿದ್ದಾರೆ. ಊಟದ ವಿಷಯದಲ್ಲಿ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಎಂಬ ಪ್ರತ್ಯೇಕ ಬಣಗಳಿರುವುದಿಲ್ಲ. ನಾವೆಲ್ಲ ಒಟ್ಟಿಗೆ ಸೇರುವುದೇ ಅಪರೂಪ. ಅದನ್ನು ಶಕ್ತಿ ಪ್ರದರ್ಶನ ಎನ್ನುವುದು ಸರಿಯಲ್ಲ. ಒಟ್ಟಿಗೆ ಸೇರಿದ್ದೇವೆ ಊಟ ಮಾಡಿದ್ದೇವೆ. ಅದರಲ್ಲಿ ತಪ್ಪೇನು ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಹೈಕಮಾಂಡ್ ಹೇಳಿದ ಮಾತನ್ನು ಧಿಕ್ಕರಿಸಿ ನಿಲ್ಲುವವರು ಯಾರು ಇಲ್ಲ. ನಮದು ಶಿಸ್ತಿನ ಪಕ್ಷ ವರಿಷ್ಠರು ಹೇಳಿದ ಮೇಲೆ ಮುಗಿಯಿತು ಎಂದು ಡಿ.ಕೆ.ಶಿವಕುಮಾರ್ ಅವರ ರಾಜಕೀಯ ಭವಿಷ್ಯ ಕುರಿತು ಪ್ರತಿಕ್ರಿಯಿಸಿದರು.

ವಿಧಾನ ಮಂಡಳದ ಅಧಿವೇಶನದ ಬಳಿಕ ಡಿ.ಕೆ.ಶಿವಕುಮಾರ್ ಅವರಿಗೆ ಅವಕಾಶ ಸಿಗುತ್ತದೆ ಎಂಬ ವಿಶ್ವಾಸ ಇದೆ. ಎಲ್ಲದಕ್ಕೂ ಹಣೆಯ ಬರಹವೇ ಮುಖ್ಯ. ಅವಕಾಶ ಸಿಗದಿದ್ದರೆ ಹಣೆಯ ಬರಹಕ್ಕೆ ಹೊಣೆ ಯಾರು ಭಗವಂತ ಏನು ಬರೆದಿದ್ದಾರೋ ಅದು ಆಗುತ್ತದೆ ಎಂದರು.

ಡಿಕೆ ಶಿವಕುಮಾರ್ ಅವರ ಹೋರಾಟ, ಶ್ರಮಕ್ಕೆ ಫಲ ಸಿಕ್ಕೆ ಸಿಗುತ್ತದೆ. ನಾವು ನಮ್ಮ ಅಭಿಪ್ರಾಯಗಳನ್ನು ಈಗಾಗಲೇ ಹೈಕಮಾಂಡ್ ನಾಯಕರ ಮುಂದೆ ಹೇಳಿದ್ದೇವೆ. ವರಿಷ್ಠರು ಕರೆದರೆ ನಾವು ಮತ್ತೊಮೆ ದೆಹಲಿಗೆ ಹೋಗುತ್ತೇವೆ ಎಂದಿದ್ದಾರೆ.

# ಮಾಜಿ ಕೇಂದ್ರ ಸಚಿವ ಶಿವರಾಜ್ ಪಾಟೀಲ್ ನಿಧನ

**ಲಾತೂರ್,ಡಿ.12–** ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಕೇಂದ್ರ ಗೃಹಸಚಿವ ಶಿವರಾಜ್ ಪಾಟೀಲ್(90) ಅವರು ಇಂದು ಬೆಳಿಗ್ಗೆ ನಿಧನರಾಗಿದ್ದಾರೆ.ಅಲ್ಪಕಾಲದ ಅನಾರೋಗ್ಯದ ನಂತರ ಪಾಟೀಲ್ ಅವರು ತಮ ತವರೂರಾದ ಮಹಾರಾಷ್ಟ್ರದ ಲಾತೂರ್‌ನಲ್ಲಿರುವ ದೇವ್‌ಘರ್‌ನಲ್ಲಿ ನಿವಾಸದಲ್ಲಿ ನಿಧನರಾಗಿದ್ದಾರೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಮೃತರು ಪುತ್ರ ಶೈಲೇಶ್ ಪಾಟೀಲ್, ಸೊಸೆ ಬಿಜೆಪಿ ನಾಯಕಿ ಅರ್ಚನಾ ಮತ್ತು ಇಬ್ಬರು ಮೊಮಕ್ಕಳನ್ನು ಅಗಲಿದ್ದಾರೆ.1991ರಿಂದ 1996ರವರೆಗೆ ಲೋಕಸಭೆಯ ಸ್ಪಿಕರ್ ಆಗಿದ್ದ ಅವರು 2004ರಿಂದ 2008ರವರೆಗೆ ಯುಪಿಎ ಸರ್ಕಾರದಲ್ಲಿ ಗೃಹಸಚಿವರಾಗಿದ್ದರು. 2010ರಿಂದ 2015ರವರೆಗೆ ಪಂಜಾಬ್–ಚಂಡೀಗಢ ಕೇಂದ್ರ ಪ್ರದೇಶದ ಆಡಳಿತಾಧಿಕಾರಿಯಾಗಿಯೂ ಸೇವೆ ಸಲ್ಲಿಸಿದ್ದರು.1935ರ ಅ.12ರಂದು ಜನಿಸಿದ ಪಾಟೀಲ್, ಲಾತೂರ್‌ನ ಪುರಸಭೆಯ ಮುಖ್ಯಸ್ಥರಾಗಿ ತಮ ರಾಜಕೀಯ ಪ್ರಯಾಣ ಪ್ರಾರಂಭಿಸಿದರು ಮತ್ತು 70ರ ದಶಕದ ಆರಂಭದಲ್ಲಿ ಶಾಸಕರಾಗಿ ಆಯ್ಕೆಯಾದರು.

ನಂತರ ಲಾತೂರ್ ಲೋಕಸಭಾ ಕ್ಷೇತ್ರವನ್ನು ಏಳು ಬಾರಿ ಗೆದ್ದರು. 2004ರ ಲೋಕಸಭಾ ಚುನಾವಣೆಯಲ್ಲಿ ಅವರು ಬಿಜೆಪಿಯ



ರೂಪತ್ಯೆ ಪಾಟೀಲ್ ನೀಲಂಗೇಕರ್ ವಿರುದ್ಧ ಪರಾಜಯಗೊಂಡಿದ್ದರು.

ಪಾಟೀಲ್ ಪುಸ್ತಕ ಓದುವುದು ,ಸೂಕ್ಷ್ಮ ಅಧ್ಯಯನ ಮತ್ತು ಸ್ಪಷ್ಟ ಪ್ರಸ್ತುತಿಗೆ ಹೆಸರುವಾಸಿಯಾಗಿದ್ದರು. ಮರಾಠಿ, ಇಂಗ್ಲಿಷ್ ಮತ್ತು ಹಿಂದಿ ಭಾಷೆಗಳಲ್ಲಿ ಅವರ ಪಾಂಡಿತ್ಯ ಹೊಂದಿದ್ದರು.ಜೊತೆಗೆ ಸಾಂವಿಧಾನಿಕ ವಿಷಯಗಳ ಮೇಲಿನ ಅವರ ಅಸಾಧಾರಣ ಗ್ರಹಿಕೆಯು ಅವರನ್ನು ಅವರ ಕಾಲದ ಅತ್ಯಂತ ಗೌರವಾನ್ವಿತ ಸಂಸದರನ್ನಾಗಿ ಮಾಡಿತು.ಆದರೆ ಮುಂಬೈ ಮೇಲಿನ ಉಗ್ರರ ದಾಳಿ ಸಂದರ್ಭದಲ್ಲಿ ಅವರ ನಡುವಳಿಕೆ ಸಾಕಷ್ಟು ಟೀಕೆಗೆ ಒಳಗಾಗಿತ್ತು.

# ಸಾಮಾಜಿಕ ಸುಧಾರಣೆಗೆ ಶರಣ ಚನ್ನಯ್ಯನವರ ಕೊಡುಗೆ ಅನನ್ಯ



**ಕಲಬುರಗಿ:ಡಿ.12–** ಸಮಾಜದಲ್ಲಿ ತುಂಬಿದ್ದ ಅಜ್ಞಾನ, ಅಂಧಕಾರ, ಶೋಷಣೆ, ಮೌಢ್ಯತೆ, ಅನೀತಿ, ಕಂದಾಚಾರ, ಜಾತೀಯತೆಯಂತಹ ಮುಂತಾದ ಸಾಮಜಿಕ ಅನಿಷ್ಟಗಳ ವಿರುದ್ಧ ಬಸವಣ್ಣನವರ ಜೊತೆಗೂಡಿ ಹೋರಾಟ ಮಾಡುವ ಮೂಲಕ ಸಮಾಜ ಸುಧಾರಣೆಗಾಗಿ ಶರಣ ಮಾದಾರ ಚನ್ನಯ್ಯನವರು ಅನನ್ಯವಾದ ಕೊಡುಗೆಯನ್ನು ನೀಡಿದ್ದಾರೆಂದು ಉಪನ್ಯಾಸಕ, ಶರಣ ಚಿಂತಕ ಎಚ್.ಬಿ.ಪಾಟೀಲ ಅಭಿಪ್ರಾಯಪಟ್ಟರು.

ನಗರದ ಜೆ.ಆರ್.ನಗರದಲ್ಲಿರುವ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶುಕ್ರವಾರ ಜರುಗಿದ 'ಶರಣ ಮಾದಾರ ಚನ್ನಯ್ಯನವರ ಜಯಂತಿ'ಯ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕ ಪುಷ್ಪ ನಮನಗಳನ್ನು ಸಲ್ಲಿಸಿ ಅವರು ಮಾತನಾಡುತ್ತಿದ್ದರು.

ಶಿವಮೊಗ್ಗ ಜಿಲ್ಲೆಯ, ಶಿಕಾರಿಪೂರ ತಾಲ್ಲೂಕಿನ ಬಳ್ಳಿಗಾಂವೆ ಗ್ರಾಮದವರಾದ ಇವರ ತಂದೆ–ತಾಯಿಯವರ ಬಗ್ಗೆ ನಿಖರ ಮಾಹಿತಿ ದೊರೆತಿಲ್ಲ. ಮೊದಲು ಹುಲ್ಲು ತಂದು ಮಾರುವ ಕಾಯಕ ಮಾಡುತ್ತಿದ್ದ ಚೆನ್ನಯ್ಯನವರು, ನಂತರದ ದಿನಗಳಲ್ಲಿ ಚರ್ಮ ಹದ ಮಾಡಿ ಜೋಡುಗಳನ್ನು ತಯಾರಿಸುವ ಕಾಯಕ ಮಾಡಿದ್ದರೆಂದು ತಿಳಿದುಬಂದಿದೆ. 'ಕೈಯುಳಿ ಕತ್ತಿ ಅಡಿಗುಂಟಕ್ಕಟಿಯಾಗಬೇಡ ಅರಿನಿಜಾತ್ಮ ರಾಮನಾ' ಎಂಬ ಅಂಕಿತನಾಮದೊಂದಿಗೆ ವಚನಗಳನ್ನು ರಚಿಸಿದ್ದಾರೆ. ಇದರಲ್ಲಿ 10 ವಚನಗಳು ಬೆಡಗಿನ ವಚನಗಳಾಗಿವೆ ಎಂದರು.

ಸಾಮಾಜಿಕ ಸಮಸ್ಯೆಗಳು, ನ್ಯಾಯ,ಭಕ್ತಿ ಸೇರಿದಂತೆ ಅನೇಕ ವಿಷಯಗಳಿಗೆ ಸಂಬಂಧಿಸಿದಂತೆ ವಚನಗಳನ್ನು ರಚಿಸಿದ್ದಾರೆ. ಬಸವಣ್ಣನವರು, ಚನ್ನಯ್ಯನವರ ಕುರಿತು ಹೇಳಿರುವ ವಚನಗಳಲ್ಲಿ, ನಡೆ,ನುಡಿ ಚೆನ್ನಾಗಿದ್ದವರೇ ಚನ್ನಯ್ಯನವರು. ಎಲ್ಲಾ ಜಾತಿ ಸಂಕೋಲೆಗಳನ್ನು ಮೀರಿ ನಿಂತವರಾಗಿದ್ದಾರೆ. ಇವರು ನಮ್ಮ ತಂದೆ ಎಂದು ಹೇಳಿಕೊಂಡಿರುವದು ಗಮನಿಸಿದರೆ, ಚನ್ನಯ್ಯನವರ ಮೇರು ವ್ಯಕ್ತಿತ್ವ ನಮಗೆ ಗೋಚರಿಸುತ್ತದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಕಸಾಪ ಉತ್ತರ ವಲಯ ಗೌರವ ಅಧ್ಯಕ್ಷ ಶಿವಯೋಗಪ್ಪ ಬಿರಾದಾರ, ಶಿಕ್ಷಕಿ ಸ್ನೇಹಾ ಚೌಹಾಣ, ಪ್ರಮುಖರಾದ ಭವಾನಿ, ಸಾಕ್ಷಿ ಹಾಗೂ ವಿದ್ಯಾರ್ಥಿಗಳಿದ್ದರು.

## ಡಿಸಿಎಂ ಡಿನ್ನರ್ ಮಿಟಿಂಗ್ ಮಾಡಿದರೆ ನಾನೇನು ಮಾಡಲಿ : ಯತೀಂದ್ರ



**ಬೆಳಗಾವಿ, ಡಿ.12–** ನಾಯಕತ್ವದ ವಿಚಾರವಾಗಿ ನಾನು ಏನು ಹೇಳಬೇಕಿತ್ತು ಅದನ್ನು ಹೇಳಿ ಆಗಿದೆ. ಪ್ರತ್ಯೇಕ ಡಿನ್ನರ್ ಮೀಟಿಂಗ್ ಗಳ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಕಾಂಗ್ರೆಸ್‌ನ ವಿಧಾನ ಪರಿಷತ್ ಸದಸ್ಯರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಡಾ.ಯತೀಂದ್ರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ನಾನು ಏನನ್ನು ಹೇಳಬೇಕಿತ್ತು ಅದನ್ನು ಹೇಳಿದ್ದೇನೆ. ಬೇರೆಯವರು ನೀಡಿದ ಹೇಳಿಕೆಗಳಿಗೆಲ್ಲ ಪ್ರತಿಕ್ರಿಯೆ ನೀಡಲು ಸಾಧ್ಯವಿಲ್ಲ ಎಂದರು. ಬೆಳಗಾವಿಯಲ್ಲಿ ದಿನಕ್ಕೊಂದು ಡಿನ್ನರ್ ಮೀಟಿಂಗ್‌ಗಳಾಗುತ್ತಿರುತ್ತವೆ. ಅದಕ್ಕೆ ನಾನು ಏನೂ ಮಾಡಲಾಗುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣದ ಔತಣಕೂಟಕ್ಕೆ ಪ್ರತಿಕ್ರಿಯಿಸಿದರು.

# ಒಳ್ಳೆಯದನ್ನು ಬೆಳೆಸೋಣ ಜ್ಞಾನವನ್ನು ಹಂಚೋಣ ವೇಮುಲಪಲ್ಲಿ ಗಾಂಧಿಯವರ ಕೃತಿ ಬಿಡುಗಡೆ

**ಬಳ್ಳಾರಿ, ಡಿ.12–** ವೇಮುಲಪಲ್ಲಿ ಗಾಂಧಿ ಅವರು ಈ ಶಾಲೆ ಕಾಲೇಜು ಮೂಲಕ ಒಳ್ಳೆಯದನ್ನೆ ಹಂಚುತ್ತಿದ್ದಾರೆ ಎಂದು ನಿವೃತ್ತ ಸಹ ಪ್ರಾಧ್ಯಾಪಕ ಡಾ.ಬಿ.ಆರ್.ಮಂಜುನಾಥ ಅಭಿಪ್ರಾಯಪಟ್ಟರು. ಅವರು ನಿನ್ನೆ ಸಂಜೆ ನಗರದ ನಂದ ವಸತಿ ಶಾಲೆಯಲ್ಲಿ ಶಾಲೆಯ ಅಧ್ಯಕ್ಷ ವೇಮುಲಪಲ್ಲಿ ಗಾಂಧಿ ಅವರು ತೆಲುಗು ಭಾಷೆಯಲ್ಲಿ ಸಂಪಾದಿಸಿದ್ದ "ಮಂಚಿದಿ ಪೆಂಚುದಾಂ ವಿಜ್ಞಾನಂ ಪೆಂಚುದಾಮು" ಎಂಬ ಕೃತಿಯನ್ನು ಎಸ್.ಅಪ್ಪಯ್ಯ ಭಟ್ಟರು ಕನ್ನಡಕ್ಕೆ ಅನುವಾದಿಸಿರುವ "ಒಳ್ಳೆಯದನ್ನು ಬೆಳೆಸೋಣ ಜ್ಞಾನವನ್ನು ಹಂಚೋಣ" ಎಂಬ ಕೃತಿ ಬಿಡುಗಡೆ ಸಮಾರಂಭವನ್ನು ಉದ್ಘಾಟನೆ ಮಾಡಿ ಮಾತನಾಡುತ್ತಿದ್ದರು.

ಒಳ್ಳೆಯದು ಎಂದರೆ ಯಾವುದು. ಪ್ರಕೃತಿ ಯಾವಾಗಲೂ ಒಳ್ಳೆಯದನ್ನೇ ನೀಡುತ್ತದೆ. ಅದನ್ನು ನಾವು ಹೇಗೆ ಸ್ವೀಕಾರ ಮಾಡುತ್ತೇವೆ ಹಾಗೆ ಒಳ್ಳೆಯದು ಮತ್ತು ಜ್ಞಾನ ಎಲ್ಲರಿಗೂ ದೊರೆಯಲಿದೆ. ಹಾಗಾಗಿ ನಾವು ಸಹ ಒಳ್ಳೆಯದನ್ನೇ ಮಾಡುತ್ತ ಅದನ್ನು ಹಂಚುವ ಕೆಲಸ ಆಗಬೇಕೆಂದರು.

ಕೃತಿ ಬಿಡುಗಡೆ ಮಾಡಿ ಮಾತನಾಡಿದ ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಅರುಣ್ ಕುಮಾರ್ ಲಗಶೆಟ್ಟಿ, ವಿ.ಗಾಂಧಿ ಅವರ ಸಮಾಜಮುಖಿ ಕಾರ್ಯ ಎಲ್ಲರಿಗೂ ಮಾದರಿಯಾಗಿದೆ. ಸಾಧನೆ ಮುಖ್ಯ ಅದರ ಕನಸು ಮಕ್ಕಳದ್ದಾಗಬೇಕು. ಅದಕ್ಕೆ ಎಲ್ಲರೂ ಒಳ್ಳೆಯದನ್ನೇ ಮಾಡಿ, ಸಂಕಲ್ಪಿಸಿದರೆ ಜ್ಞಾನವೂ ಲಭಿಸಲಿದೆಂದರು.

ಕೃತಿ ಕುರಿತು ಮಾತನಾಡಿದ ನಿವೃತ್ತ ಉಪನ್ಯಾಸಕ ಎನ್.ಬಸವರಾಜ್, ಪತ್ರಿಕೆಗಳಲ್ಲಿ ವಿವಿಧ ವಸ್ತುವಿಷಯಗಳನ್ನು ಒಳಗೊಂಡು ಪ್ರಕಟಗೊಂಡ ಉತ್ತಮ ಅಂಕಣಗಳ ಬರಹಗಳನ್ನು ಕ್ರೂಡೀಕರಿಸಿ ಈ ಕೃತಿ ನೀಡಿರುವುದು ಶ್ಲಾಘನೀಯಕಾರ್ಯವೆಂದರು.

ಎಸ್.ಅಪ್ಪಯ್ಯ ಭಟ್ಟರು ಮಾತನಾಡಿ ಕೃತಿಯಲ್ಲಿ 13, 14 ನೇ ಲೇಖನಗಳನ್ನು ಓದಿ ಎಂದು ಒತ್ತಿ ಹೇಳಿದರು.

ಅಧ್ಯಕ್ಷತೆವಹಿಸಿ ಮಾತನಾಡಿದ ವೇಮುಲಪಲ್ಲಿ ಗಾಂಧಿ ಅವರು ಮಾತನಾಡಿ, ಪ್ರತಿದಿನ ಪೇಪರ್ ನಲ್ಲಿ ಬರುವ ಉತ್ತಮವಾದುದನ್ನು ಸಂಗ್ರಹಿಸಿ ಈ ಕೃತಿ ತರಲು ಸಂಕಲ್ಪ ಮಾಡಿದೆನೆಂದರು. ಇನ್ನೂ ಎರೆಡು ಸಂಪುಟದಲ್ಲಿ ಈ ಕೃತಿ ಬರಲಿದೆ. ಇವನ್ನು ಓದಿದರೆ



ಮಾನವೀಯತೆ ಎಲ್ಲರೂ ಮೂಡಲಿದೆಂಬ ಆಶಾಭಾವನೆ ವ್ಯಕ್ತಪಡಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಸಾಪ ಜಿಲ್ಲಾ ಅಧ್ಯಕ್ಷ ನಿಷ್ಠಿ ರುದ್ರಪ್ಪ ಅವರು ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸುವಂತೆ ಕೋರಿದರು.

ಕಾರ್ಯಕ್ರಮದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಎನ್.ವೀರಭದ್ರಗೌಡ, ನಂದ ಶಾಲೆಯ ಉಪಾಧ್ಯಕ್ಷ ವಿ.ಮುರುಳಿಕೃಷ್ಣ, ಕಾರ್ಯದರ್ಶಿ ವಿ.ರಮಣಕುಮಾರ್ ಮೊದಲಾದವರು ಇದ್ದರು.

# ಬೆಂಬಲ ಬೆಲೆಯಲ್ಲಿ ತಕ್ಷಣ ತೊಗರಿ ಖರೀದಿ ಕೇಂದ್ರ ಆರಂಭಿಸಿ : ತೇಲ್ಕೂರ

**ಕಲಬುರಗಿ,ಡಿ.12–** ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದ್ದರಿಂದ ರಾಜ್ಯ ಸರ್ಕಾರ ಮೀನಾ ಮೇಷ ಏಣಿಸದೇ ಈ ಕೂಡಲೇ ಖರೀದಿ ಕೇಂದ್ರಗಳನ್ನು ಆರಂಭಿಸುವಂತೆ ಮಾಜಿ ಶಾಸಕ, ರಾಜಕುಮಾರ ಪಾಟೀಲ್ ತೇಲ್ಕೂರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಕೇಂದ್ರ ಸರ್ಕಾರ ಪ್ರಸಕ್ತವಾಗಿ ತೊಗರಿ ಖರೀದಿಗೆ ಒಪ್ಪಿಗೆ ನೀಡಿದ್ದಕ್ಕೆ ಹರ್ಷ ವ್ಯಕ್ತಪಡಿಸಿ ಕೇಂದ್ರ ಸರ್ಕಾರ 9.67 ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗೆ ಕೇಂದ್ರ ಅನುಮತಿ ನೀಡಿದ್ದನ್ನು ಸ್ವಾಗತಿಸಿದ್ದಾರೆ. ಕೇಂದ್ರದ ಅನುಮತಿ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಿನಿಂದಲೇ ರೈತರ ನೊಂದಣಿ ಪ್ರಕ್ರಿಯೆ ಆರಂಭಿಸಿ ವಾರದೊಳಗೆ ತೊಗರಿ ಖರೀದಿ ಶುರು ಮಾಡಬೇಕೆಂದಿದ್ದಾರೆ.

ಅತಿವೃಷ್ಟಿ ಯಿಂದ ತೊಗರಿ ಬೆಳೆ ಹಾನಿಯಾಗಿ ಅಲ್ಲಲ್ಲಿ ಅಲ್ಪ ಸ್ವಲ್ಪ ಬೆಳೆ ಉಳಿದು ರಾಶಿಯಾಗುತ್ತಿದೆ. ಆದರೆ ಮಾರುಕಟ್ಟೆಯಲ್ಲಿ ಬೆಂಬಲ ಬೆಲೆಗಿಂತ ಕಡಿಮೆಯಿದ್ದು, ಕ್ವಿಂಟಾಲ್ ತೊಗರಿಗೆ ಕೇವಲ 7000 ರೂ. ದರದಲ್ಲಿ ಮಾರಾಟವಾಗುತ್ತಿದೆ. ರೈತರಿಗೆ ಕ್ವಿಂಟಾಲ್ ಗೆ 9000 ರೂ. ದರದಲ್ಲಿ ಖರೀದಿ ಮಾಡಿದರೆ ರೈತರಿಗೆ ಅನುಕೂಲವಾಗುತ್ತದೆ ಜತೆಗೆ ಮಾರುಕಟ್ಟೆಯಲ್ಲೂ ದರ ಹೆಚ್ಚಳಕ್ಕೆ ಕಾರಣವಾಗುತ್ತದೆ. ಹೀಗಾಗಿ ರಾಜ್ಯ ಸರ್ಕಾರ ಪ್ರತಿ ಕ್ವಿಂಟಾಲ್ ಗೆ ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿ ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿ ಪ್ರಾರಂಭಿಸಬೇಕು. ಕೇಂದ್ರದ ಬೆಂಬಲ ಬೆಲೆ ಕ್ವಿಂಟಾಲ್ ಗೆ 8 ಸಾವಿರ ರೂ ಇದ್ದು, ರಾಜ್ಯ ಸರ್ಕಾರ 1 ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿದರೆ ಕ್ವಿಂಟಾಲ್ ಗೆ 9 ಸಾವಿರ ರೂ ದರದಲ್ಲಿ ಖರೀದಿ ಮಾಡಿದರೆ ರೈತರಿಗೆ ಅನುಕೂಲವಾಗುತ್ತದೆ ಎಂದು ತೇಲ್ಕೂರ ಆಗ್ರಹಿಸಿದ್ದಾರೆ.

ಪ್ರಸಕ್ತವಾಗಿ ಅತಿವೃಷ್ಟಿಯಿಂದ ಬೆಳೆಗಳು ಹಾಳಾಗಿ ರೈತ ತೊಂದರೆಯಲ್ಲಿರುವುದು ಎಲ್ಲರಿಗೂ ತಿಳಿದ ವಿಷಯ. ಹೀಗಾಗಿ ಸರ್ಕಾರ ಇಷ್ಟೊತ್ತಿಗೆ ಬೆಳೆ ಹಾನಿ ಪರಿಹಾರವನ್ನು ಸಂಪೂರ್ಣವಾಗಿ ರೈತರ ಖಾತೆಗೆ ಜಮಾ ಮಾಡಬೇಕಿತ್ತು. ಮೂರು ಇಲ್ಲವೇ ಆರೇಳು ಸಾವಿರ ರೂ ಮಾತ್ರ ಹಾಕಲಾಗಿದೆ. ಎನ್ ಡಿಆರ್ ಎಫ್ ನಿಯಮಾವಳಿ ಅಡಿ ಪ್ರತಿಯೊಬ್ಬ ರೈತರಿಗೆ ಕೇಂದ್ರ ಸರ್ಕಾರದವೇ ಹೆಕ್ಟೇರ್ ಗೆ 8500 ರೂ. ನಂತೆ ಎರಡು ಹೆಕ್ಟೇರ್ ಸೇರಿ 17000 ರೂ ನೀಡಲಾಗುತ್ತದೆ. ಅದರ ಜತೆಗೆ ರಾಜ್ಯ ಸರ್ಕಾರದ್ದು ಸೇರಿದರೆ 34000 ರೂ. ಆಗುತ್ತದೆ. ಆದ್ದರಿಂದ ಪ್ರತಿ ರೈತಗೆ 34 ಸಾವಿರ ರೂ ಪರಿಹಾರ ನೀಡಬೇಕು. ಇಲ್ಲದಿದ್ದರೆ ರಾಜ್ಯ ಸರ್ಕಾರದ ಬೊಕ್ಕಸ ಖಾಲಿಯಾಗಿದೆ ಎಂಬುದಾಗಿ ತಿಳಿದುಕೊಳ್ಳಬೇಕಾಗುತ್ತದೆ. ಎಂದಿದ್ದಾರೆ.ಪ್ರಸಕ್ತವಾಗಿ ಕೇಂದ್ರದ ಪ್ರಧಾನ ಮಂತ್ರಿ ಫಸಲು ವಿಮಾ ಯೋಜನೆ ಅಡಿ ಅತಿ ಹೆಚ್ಚಿನ ರೈತರು ಬೆಳೆವಿಮೆ ಮಾಡಿಸಿದ್ದಾರೆ. ಹೀಗಾಗಿ ತೊಗರಿ ಬೆಳೆ ಹಾಳಾಗಿದ್ದರಿಂದ ನೂರಕ್ಕೆ ನೂರಷ್ಟು ಬೆಳೆ ವಿಮೆ ದೊರಕುವ ನಿಟ್ಟಿನಲ್ಲಿ ಕಲಬುರಗಿ ಜಿಲ್ಲಾಡಳಿತ ಮುಂದಾಗಬೇಕು. ಕನಿಷ್ಠ ಸಾವಿರ ಕೋ.ರೂ. ಯಾದರೂ ಜಿಲ್ಲೆಯ ರೈತರಿಗೆ ಬೆಳೆವಿಮೆ ದೊರಕಬೇಕೆಂದಿದ್ದಾರೆ

ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು ಮಾತೆತ್ತಿದರೆ ಕೇಂದ್ರದ ದತ್ತ ಬೊಟ್ಟು ಮಾಡುತ್ತಾರೆ. ಆದರೆ ಕೇಂದ್ರ ಸರ್ಕಾರವೇ 9. 67 ಮೆಟ್ರಿಕ್ ಟನ್ ತೊಗರಿ ಬೇಳೆ ಖರೀದಿಗೆ ಅನುಮತಿ ನೀಡಿದೆ. ಹೀಗಾಗಿ ರಾಜ್ಯ ಸರ್ಕಾರದಿಂದ ಪ್ರತಿ ಕ್ವಿಂಟಾಲ್ ಗೆ 1 ಸಾವಿರ ರೂ ಪ್ರೋತ್ಸಾಹ ಧನ ನಿಗದಿ ಮಾಡಿ ಈ ಕೂಡಲೇ ಖರೀದಿ ಕೇಂದ್ರಗಳನ್ನು ಆರಂಭಿಸುವ ಮುಖಾಂತರ ರೈತರಿಗೆ ಸ್ಪಂದಿಸಲಿ.

–ರಾಜಕುಮಾರ ಪಾಟೀಲ್ ತೇಲ್ಕೂರ , ಮಾಜಿ ಶಾಸಕರು ಸೇಡಂ

# ಲೈಂಗಿಕ ಸೋಂಕಿನಿಂದ ಹರಡುವ ಸಿಫಿಲಿಸ್ ನಿರ್ಲಕ್ಷಿಸಿದರೆ ಅಪಾಯಕಾರಿಯಾಗಬಲ್ಲದು: ಡಾ ಮಹಮ್ಮದ್ ಶಾಕೀರ್



ಧೈರ್ಯದ ದಾರಿ

**ರಾಯಚೂರು,ಡಿ.12–** ಕಣ್ಣಿಗೆ ಕಾಣದ ಸುರುಳಿಯಾಕಾರದ ಬ್ಯಾಕ್ಟೀರಿಯಂ ಟ್ರೆಪೋನೆಮಾ ಪ್ಯಾಲಿಡಮ್‌ನಿಂದ ಹರಡುವ ಇದು ಸಿಫಿಲಿಸ್ ಸೊಂಕು ಹುಣ್ಣಿನ ರೂಪದಲ್ಲಿ ಇದ್ದು ಅಸುರಕ್ಷಿತ, ಅಪರಿಚಿತರೊಂದಿಗಿನ ಲೈಂಗಿಕ ಸಂಪರ್ಕದಿಂದ ಒಬ್ಬರಿಂದ ಒಬ್ಬರಿಗೆ ಹರುಡುವ ಸಾಧ್ಯತೆಯಿದ್ದು ಈ ದಿಶೇಯಲ್ಲಿ ವೈಯಕ್ತಿಕ ಕಾಳಜಿ ಅತ್ಯಂತ ಪ್ರಮುಖವಾಗಿದೆ ಎಂದು ಜಿಲ್ಲಾ ಡ್ಯಾಪ್ಕೋ ಹಾಗೂ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ ಮಹಮ್ಮದ್ ಶಾಕೀರ್ ಮೋಹೀಯುದ್ದಿನ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಮೂಲಕ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಹೆಚ್‌ಐವಿ ಏಡ್ಸ್ ಯುವ ಜನೋತ್ಸವ ಅಡಿಯಲ್ಲಿ ಗರ್ಭಿಣಿ ತಾಯಂದಿರಿಗೆ ವಿಶೇಷ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡುತ್ತಾ, ಸಾಮಾನ್ಯವಾಗಿ ಲೈಂಗಿಕ ರೋಗಗಳು ಯಾರದೋ ತಪ್ಪಿಗೆ ಇನ್ನೊಬ್ಬರಿಗೆ ಶಿಕ್ಷೆಯ ರೂಪದಲ್ಲಿ ಬರುತ್ತವೆ, ಅದರಲ್ಲೂ ಹೆಚ್‌ಐವಿ, ಸಿಫಿಲಿಸ್ ಪ್ರಮುಖವಾಗಿವೆ.

ದೈಹಿಕ ಸಂಪರ್ಕದ ಸಮಯದಲ್ಲಿ ಸಿಫಿಲಿಟಿಕ್ ಹುಣ್ಣು ವಿನೊಂದಿಗೆ ನೇರ ಸಂಪರ್ಕದ ಮೂಲಕ ಹರಡುವುದಲ್ಲದೆ, ಸೊಂಕಿಗೆ ಒಳಗಾದಾಗ ಗರ್ಭಾವಸ್ಥೆಯಲ್ಲಿ ಸೋಂಕಿತ ತಾಯಿಯಿಂದ ಅವಳ ಮಗುವಿಗೆ ಸಹ ಹರಡಬಹುದು ಅದರಲ್ಲೂ ಹುಟ್ಟುವ ಮಗು ಸಹ ಜನ್ಮಜಾತ ಸಿಫಿಲಿಸ್‌ಗೆ ಕಾರಣವಾಗ ಬಹುದಾಗಿದೆ.

ಮತ್ತು ಸಾಂಕ್ರಾಮಿಕ ಸೋಂಕು ರಕ್ತ ಮತ್ತು ದುಗ್ಧರಸದಿಂದ ದೇಹದಾದ್ಯಂತ ಹರಡಿ ಗಂಭೀರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಕಾರಣ ಜನನಾಂಗಗಳಲ್ಲಿ ದೀರ್ಘಕಾಲ ಹುಣ್ಣುಗಳು ಇದ್ದಲ್ಲಿ ನಿರ್ಲಕ್ಷಿಸದೆ ತಪ್ಪದೆ ತಜ್ಞ ವೈದ್ಯರಿಂದ ಸಲಹೆ, ಅಗತ್ಯವಿದ್ದಲ್ಲಿ ಚಿಕಿತ್ಸೆ ಪಡೆದು ಸ್ವಾಸ್ಥ್ಯ ಸಮಾಜ ನಿರ್ಮಿಸಲು ವಿನಂತಿಸಿದರು.

ಈ ಸಂದರ್ಭದಲ್ಲಿ ಮಕ್ಕಳ ತಜ್ಞರಾದ ಡಾ ಅನುಷಾ, ಜಿಲ್ಲಾ ಡ್ಯಾಪ್ಕೊ ಮೇಲ್ವಿಚಾರಕರ ಮಲ್ಲಯ್ಯ ಮಠಪತಿ ಮಾತನಾಡಿದರು. ರೆಡಿಯಾಲಜಿಸ್ಟ್ ಡಾ ಭುವನೇಶ್ವರಿ, ಪ್ರಸೂತಿ ತಜ್ಞೆ ಡಾ ಪವಿತ್ರಾ ಪಾಟೀಲ್, ವೈದ್ಯಾಧಿಕಾರಿ ಡಾ ರಾಕೇಶ್,ಡಾ ಸುನೀತಾ,ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ, ಹಿರಿಯ ಶುಶ್ರೂಷಣಾಧಿಕಾರಿ ಸಲೋಮಿ, ಡ್ಯಾಪ್ಕೊ ವಿಭಾಗದ ಪುಷ್ಪಲತಾ,ಸಿಮಾಲತಾ, ಶಾಂತಕುಮಾರ,ರಾಮಚಂದ್ರ, ಸೇರಿದಂತೆ ತಾಯಂದಿರು ಹಾಗೂ ಇತರರು ಉಪಸ್ಥಿತರಿದ್ದರು.

# ಡಿಕೆಶಿ ಬಣದ ಔತಣಕೂಟ ಕುರಿತು ಉಚ್ಛಾಟಿತ ಶಾಸಕರ ಸ್ಫೋಟಕ ಹೇಳಿಕೆ

**ಬೆಳಗಾವಿ, ಡಿ.12–** ಇಲ್ಲಿನ ಖಾಸಗಿ ಫಾರ್ಮ್ ಹೌಸ್ ನಲ್ಲಿ ಗುರುವಾರ ರಾತ್ರಿ ನಡೆದ ಔತಣಕೂಟದಲ್ಲಿ ಸುಮಾರು 70 ರಿಂದ 75 ಮಂದಿ ಶಾಸಕರು ಮತ್ತು ಸಚಿವರು ಭಾಗವಹಿಸಿದ್ದರು ಎಂದು ಹೇಳುವ ಮೂಲಕ ಕಾಂಗ್ರೆಸ್ ನಲ್ಲಿನ ರಾಜಕೀಯ ಬೆಳವಣಿಗೆಗಳಿಗೆ ಬಿಜೆಪಿಯ ಉಚ್ಛಾಟಿತ ಶಾಸಕ ಎಸ್.ಟಿ. ಸೋಮಶೇಖರ್ ಸ್ಫೋಟಕ ತಿರುವು ನೀಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಬೆಂಬಲಿಗರಿಗೆ ಮೊನ್ನೆ ಬೆಳಗಾವಿಯ ಶಾಸಕರೊಬ್ಬರು ಔತಣಕೂಟ ಆಯೋಜಿಸಿದ್ದರು. ಡಿ.ಕೆ.ಶಿವಕುಮಾರ್ ಮತ್ತು ಅವರ ಬೆಂಬಲಿಗರು ಅದರಿಂದ ದೂರ ಉಳಿದಿದ್ದರು.

ನಿನ್ನೆ ರಾತ್ರಿ ಬೆಳಗಾವಿ ಜಿಲ್ಲಾ ಕಾಂಗ್ರೆಸ್ಸಿನ ಮಾಜಿ ಅಧ್ಯಕ್ಷ ದೊಡ್ಡಣ್ಣನವರ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣಕ್ಕಾಗಿಯೇ ಔತಣಕೂಟ ಆಯೋಜಿಸಿದ್ದರು. ಅದರಲ್ಲಿ ಸುಮಾರು 45 ಮಂದಿ ಶಾಸಕರು ಭಾಗವಹಿಸಿದ್ದರು ಎಂದು ಹೇಳಲಾಗಿತ್ತು. ಆದರೆ 75 ಹೆಚ್ಚು ಮಂದಿ ಶಾಸಕರು ಭಾಗವಹಿಸಿದ್ದರು ಎಂದು ಎಸ್.ಟಿ.ಸೋಮಶೇಖರ್ ಹೇಳುವ ಮೂಲಕ ಅಚ್ಚರಿ ಮೂಡಿಸಿದ್ದಾರೆ.

ಎಸ್.ಟಿ.ಸೋಮಶೇಖರ್ ಮೂಲ ಕಾಂಗ್ರೆಸ್ ನವರಾಗಿದ್ದರೂ, ಆಪರೇಷನ್ ಕಮಲದ ವೇಳೆ ಬಿಜೆಪಿ ಸೇರಿದ್ದರು. ಅಲ್ಲಿ ಸಚಿವರಾಗಿದ್ದರು, 2023ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯಿಂದ ಯಶವಂತಪುರ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಪಕ್ಷ ವಿರೋಧಿ ಚಟುವಟಿಕೆಗಳಿಗಾಗಿ ಬಿಜೆಪಿಯಿಂದ ಉಚ್ಛಾಟನೆಗೊಂಡಿದ್ದಾರೆ. ಆ ಬಳಿಕ ಕಾಂಗ್ರೆಸ್ ಪಾಳೇಯದಲ್ಲಿಯೇ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದಾರೆ.

ತಾವು ಈಗ ಬಿಜೆಪಿ ಅಥವಾ ಕಾಂಗ್ರೆಸ್ ಶಾಸಕರಲ್ಲ. ಯಾವ ಪಕ್ಷದ ಶಾಸಕಾಂಗ ಸಭೆಗಳಲ್ಲೂ ಭಾಗವಹಿಸುವುದಿಲ್ಲ.



ಸ್ವತಂತ್ರವಾಗಿದ್ದೇನೆ ಎಂದು ಎಸ್.ಟಿ.ಸೋಮಶೇಖರ್ ಹೇಳಿದ್ದಾರೆ.

ಔತಣಕೂಟದ ಬಗ್ಗೆ ಮಾತನಾಡಿದ ಅವರು, ನಾನು ಮತ್ತು ಮತ್ತೊಬ್ಬ ಉಚ್ಛಾಟಿತ ಶಾಸಕ ಶಿವರಾಂ ಹೆಬ್ಬಾರ್ ಊಟದ ಸಭೆಯಲ್ಲಿ ಭಾಗವಹಿಸಿದ್ದೇವು. ಅಲ್ಲಿ ರಾಜಕೀಯ ಚರ್ಚೆಯಾಗಿಲ್ಲ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು ಎಂಬ ವಿಚಾರಗಳು ಪ್ರಸ್ತಾಪವಾಗಲಿಲ್ಲ. ಎಲ್ಲರೂ ಒಟ್ಟಾಗಿದ್ದರು ಎಂದಿದ್ದಾರೆ.

ಡಿ.ಕೆ.ಶಿವಕುಮಾರ್‌ಗೆ ಮಾಡಿದ ಕೆಲಸಕ್ಕೆ ಕೂಲಿ ಸಿಕ್ಕೆ ಸಿಗುತ್ತದೆ. ರಾಷ್ಟ್ರೀಯ ಪಕ್ಷಗಳಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ. ವರಿಷ್ಠರ ತೀರ್ಮಾನಗಳಿಗೆ ವಿರುದ್ಧವಾಗಿ ಮಾತನಾಡುವವರು ಯಾರಿದ್ದಾರೆ ಎಂದು ಪ್ರಶ್ನಿಸಿದರು.

ಬಿಜೆಪಿಯಲ್ಲಿ ಯಡಿಯೂರಪ್ಪ ಅವರನ್ನು ಬದಲಾಯಿಸಿ ಬಸವರಾಜ್ ಬೊಮ್ಮಾಯಿ ಅವರನ್ನು ಮುಖ್ಯಮಂತ್ರಿ ಮಾಡುವಾಗ ಶಾಸಕರ ಸಂಖ್ಯಾಬಲವನ್ನು ಲೆಕ್ಕ ಹಾಕಿರಲಿಲ್ಲ. ಹೈಕಮಾಂಡ್ ಹೇಳಿದ ಮೇಲೆ ಮುಗಿಯಿತು. ಅದರಂತೆ ಮುಂದಿನ ಮುಖ್ಯಮಂತ್ರಿ ಆಯ್ಕೆಯಾಗುತ್ತಾರೆ. ರಾಷ್ಟ್ರೀಯ ಪಕ್ಷಗಳಲ್ಲಿ ಹಿಗೆಯೇ ನಡೆಯುತ್ತದೆ ಎಂದಿದ್ದಾರೆ.

ಕಾಂಗ್ರೆಸ್ಸಿನಲ್ಲಿ ವರಿಷ್ಠರು ಹೇಳಿದಂತೆ ಎಲ್ಲಾ ಶಾಸಕರು ಕೇಳುತ್ತಾರೆ. ಡಿ.ಕೆ.ಶಿವಕುಮಾರ್ ಎಂಟು ಬಾರಿ ಶಾಸಕರಾಗಿದ್ದಾರೆ. ಸಚಿವರಾಗಿ ಹಲವಾರು ಖಾತೆಗಳ ಜವಾಬ್ದಾರಿ ನಿಭಾಯಿಸಿದ್ದಾರೆ. ಕಾಂಗ್ರೆಸ್ ಪಕ್ಷಕ್ಕಾಗಿ ಹಗಲು-ರಾತ್ರಿ ರಾಜ್ಯದ ಉದ್ದಗಲಕ್ಕೂ ಸುತ್ತಿದ್ದಾರೆ. ಅವರು ಒಂದು ಬಾರಿ ಏಕೆ ಮುಖ್ಯಮಂತ್ರಿ ಆಗಬಾರದು ಎಂದು ಸೋಮಶೇಖರ್ ಪ್ರಶ್ನಿಸಿದರು.

ಹಣೆಯಲ್ಲಿ ಬರೆದಿದ್ದರೆ ಅವರ ಮುಖ್ಯಮಂತ್ರಿ ಆಗಿಯೇ ಆಗುತ್ತಾರೆ. ಇಲ್ಲವಾದರೆ ಇಲ್ಲ ನಾನು ಹುಟ್ಟಾ ಕಾಂಗ್ರೆಸಿಗ, ಮೂಲ ಪಕ್ಷದಲ್ಲಿ ಸಚಿವನಾಗಲಿಲ್ಲ. ಬಿಜೆಪಿಯಲ್ಲಿ ಸಚಿವರಾಗಬೇಕು ಎಂದು ಹಣೆಯಲ್ಲಿ ಬರೆದಿತ್ತು. ಅದರಂತೆ ಆದೆ. ಡಿ.ಕೆ.ಶಿವಕುಮಾರ್ ಅವರ ಹಣೆಯಲ್ಲಿ ಬರೆದಿದ್ದರೆ ಮುಖ್ಯಮಂತ್ರಿಯಾಗುವುದನ್ನು ಯಾರು ತಪ್ಪಿಸಲು ಸಾಧ್ಯವಿಲ್ಲ ಎಂದರು.

ಬಿಜೆಪಿಯತ್ತ ಡಿ.ಕೆ.ಶಿವಕುಮಾರ್ ಮುಖ ಮಾಡಿದ್ದಾರೆ ಎಂಬುದನ್ನು ಅಲ್ಲಗಳದೆ ಸೋಮಶೇಖರ್, ಕಾಂಗ್ರೆಸ್‌ಕ್ಕಾಗಿ ಅವರು ಕಷ್ಟಪಟ್ಟು ಕೆಲಸ ಮಾಡಿದ್ದಾರೆ, ಶ್ರಮ ಹಾಕಿದ್ದಾರೆ. ಬಿಜೆಪಿಗೆ ಹೋಗುವ ಪ್ರಮೇಯವೇ ಬರುವುದಿಲ್ಲ. ಮಾಡಿದ ಕೆಲಸಕ್ಕೆ ಕೂಲಿ ಸಿಕ್ಕೆ ಸಿಗುತ್ತದೆ. ಕೂಲಿ ಕೊಡುವುದಿಲ್ಲ ಎಂದು ಯಾರಾದರೂ ಏಕೆ ಹೇಳುತ್ತಾರೆ. ಡಿಕೆ ಶಿವಕುಮಾರ್ ಜೊತೆಯಲ್ಲಿ ನೂರಾರು ಕಾರ್ಯಕರ್ತರು ದುಡಿದಿದ್ದಾರೆ ಎಂದು ಹೇಳಿದರು. ನಾಯಕತ್ವ ಬದಲಾವಣೆಯ ಬಗ್ಗೆ ಹೈಕಮಾಂಡ್ ಮೌನವಾಗಿದೆ ಎಂದು ಭಾವಿಸಬೇಕಿಲ್ಲ ಅಧಿವೇಶನ ನಡೆಯುತ್ತಿದೆ ಎಂದು ಸದ್ಯಕ್ಕೆ ಸುಮನಿರಬಹುದು. ಮುಂದೆ ಇದು ಇತ್ಯರ್ಥವಾಗಲಿದೆ. ಕಾಂಗ್ರೆಸ್ ಪಕ್ಷಕ್ಕೆ ಈಗಾಗಲೇ ಸಾಕಷ್ಟು ಸಂಖ್ಯಾ ಬಲ ಇದೆ. ನಮ ಬೆಂಬಲ ಕೇಳುವ ಅಗತ್ಯ ಬರುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

# ಬೆಳಗಾವಿಯಲ್ಲಿ ಸಿಎಂ ಡಿಸಿಎಂ ಬಣಗಳ ಬಲ ಪ್ರದರ್ಶನ

**ಬೆಳಗಾವಿ, ಡಿ.12–** ಬೆಳಗಾವಿಯಲ್ಲಿ ನಡೆಯು ತ್ತಿರುವ ಚಳಿಗಾಲದ ಅಧಿವೇಶನದ ವೇಳೆಯಲ್ಲಿ ಅಭಿವೃದ್ಧಿ ಕಾರ್ಯಗಳ ಚರ್ಚೆಗಿಂತಲೂ, ರಾಜಕೀಯ ಮೇಲಾಟಗಳು ಜೋರಾಗಿದೆ. ಸಿಎಂ ಸಿದ್ದು ಮತ್ತು ಡಿಸಿಎಂ ಡಿಕೆಶಿ ಅವರ ಗುಂಪುಗಳ ನಡುವೆ ಔತಣಕೂಟ ಸಭೆಗಳು ದಿನೇ ದಿನೇ ಕುತೂಹಲ ಹೆಚ್ಚಿಸುತ್ತಿವೆ.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಿಯೇ ಆಗುತ್ತಾರೆ ಎಂದು ಅವರ ಬೆಂಬಲಿಗರು ಬಲವಾದ ಪ್ರತಿಪಾದನೆ ಮಾಡುತ್ತಿದ್ದಾರೆ. ಮತ್ತೊಂದೆಡೆ ಸಿದ್ದರಾಮಯ್ಯ ಅವರ ಪುತ್ರ ಡಾ.ಯತೀಂದ್ರ ಸೇರಿದಂತೆ ಅನೇಕರು 5 ವರ್ಷಗಳವರೆಗೂ ನಾಯಕತ್ವ ಬದಲಾವಣೆ ಇಲ್ಲ ಎಂದು ಬಲವಾಗಿ ಹೇಳುತ್ತಿದ್ದಾರೆ. ಈ ನಡುವೆ ಬೆಂಗಳೂರಿನಲ್ಲಿ ನಡೆದ ಉಪಾಹಾರಕೂಟಗಳು ರಾಜಕೀಯ ವಾದ-ಪ್ರತಿವಾದಗಳಿಗೆ ತಾತ್ಕಾಲಿಕ ಕದನ ವಿರಾಮ ನೀಡಿದ್ದವು.

ಆದರೆ, ತೆರೆ-ಮರೆಯಲ್ಲಿ ಕುರ್ಚಿಯ ಕದನ ನಡೆಯುತ್ತಲೇ ಇದೆ. ಬಲಪ್ರದರ್ಶನಗಳು ಒಳಗೊಳಗೆ ಜಿದ್ದಾಜಿದ್ದಿಯನ್ನು ಸೃಷ್ಟಿಸಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಣದಲ್ಲಿ ಬೇರೆ ಬೇರೆ ರೀತಿಯ ತಂತ್ರಗಾರಿಕೆಗಳು ಚಾಲು ಇವೆ. ನಾಯಕತ್ವ ಬದಲಾಗಬಾರದು. ಬದಲಾಗುವುದು ಅನಿವಾರ್ಯ ಎಂದಾದರೆ ದಲಿತರನ್ನೆ ಮುಖ್ಯಮಂತ್ರಿ ಮಾಡಬೇಕು ಎಂಬ ಬೇಡಿಕೆಯನ್ನು ಮಂಡಿಸಲಾಗಿದೆ.

ಡಿ.ಕೆ.ಶಿವಕುಮಾರ್ ಪರ್ಯಾಯ ಶಕ್ತಿ ಕ್ರೋಢೀಕರಣಕ್ಕೆ ತಮ ಬೆಂಬಲಿಗರ ಜೊತೆ ರಹಸ್ಯ ಸಭೆ ನಡೆಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಬೆಂಬಲಿಗರಿಗಾಗಿ ಆಸಿಫ್ ಶೇಠ್



ಔತಣಕೂಟ ಆಯೋಜಿಸಿದರು. ಅದಕ್ಕೆ ಡಿ.ಕೆ.ಶಿವಕುಮಾರ್ ಮತ್ತು ಅವರ ಬಣ ಗೈರು ಹಾಜರಾಗಿತ್ತು. ಈಗ ಡಿ.ಕೆ. ಶಿವಕುಮಾರ್ ಅವರಿಗಾಗಿ ಮತ್ತೊಂದು ಸುತ್ತಿನ ಭೋಜನಕೂಟ ಆಯೋಜಿಸಲಾಗಿದೆ.

ನಿನ್ನೆ ರಾತ್ರಿ ಬೆಳಗಾವಿ ಜಿಲ್ಲೆಯ ಕಾಂಗ್ರೆಸ್ ಮಾಜಿ ಅಧ್ಯಕ್ಷರು ಡಿ.ಕೆ.ಶಿವಕುಮಾರ್ ಮತ್ತು ಅವರ ಬೆಂಬಲಿಗರಿಗೆ ಔತಣಕೂಟ ಆಯೋಜಿಸಿದ್ದು, ಅದರಲ್ಲಿ ಸುಮಾರು 40ಕ್ಕೂ ಹೆಚ್ಚು ಶಾಸಕರು ಭಾಗವಹಿಸಿದ್ದರು ಎನ್ನಲಾಗಿದೆ. ಶಾಸಕರ ಈ ಪ್ರತ್ಯೇಕ ಔತಣಕೂಟಗಳು ಕಾಂಗ್ರೆಸ್‌ನಲ್ಲಿ ಗೊಂದಲದ ವಾತಾವರಣ ನಿರ್ಮಿಸಿವೆ.

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಯವರನ್ನು ಒಟ್ಟಿಗೆ ಕೂರಿಸಿ ನಾಯಕತ್ವ ವಿಚಾರದ ಬಗ್ಗೆ ಸ್ಪಷ್ಟ ಸೂಚನೆ ನೀಡಲು ಇದೇ ತಿಂಗಳ 19ರಂದು ದೆಹಲಿಯಲ್ಲಿ ಸಭೆ ನಡೆಯಲಿದೆ ಎಂದು ಹೇಳಲಾಗುತ್ತಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ರಾಹುಲ್ ಗಾಂಧಿ ಅವರ ಸಮುಖದಲ್ಲಿ ಸಭೆ ನಡೆಯಲಿದ್ದು, ನಾಯಕತ್ವ ಬದಲಾವಣೆಗೆ ಸ್ಪಷ್ಟ ನಿರ್ದೇಶನ ಹೊರಬೀಳಲಿದೆ ಎನ್ನಲಾಗುತ್ತಿದೆ.

ಅದಕ್ಕೂ ಮೊದಲೇ ಎರಡೂ ಬಣಗಳಲ್ಲಿ ಶಕ್ತಿ ಪ್ರದರ್ಶನಗಳು ನಡೆಯುತ್ತಿವೆ. ತೆರೆಮರೆಯಲ್ಲಿ ಶಾಸಕರನ್ನು ಕ್ರೋ?ಢೀಕರಿಸುವ ಪ್ರಯತ್ನಗಳಾಗುತ್ತಿವೆ. ಸಿದ್ದರಾಮಯ್ಯ ಅವರ ಬಣದ ನಾಯಕರುಗಳು ಮತ್ತೊಮೆ ಶಾಸಕಾಂಗ ಸಭೆ ನಡೆಸಿ ಅಲ್ಲಿಯೇ ನಾಯಕತ್ವ ನಿರ್ಧಾರವಾಗಬೇಕು ಎಂಬ ರೀತಿ ವಾದ ಮಂಡಿಸುತ್ತಿದ್ದಾರೆ. ಇದಕ್ಕೆ ಟಾಂಗ್ ನೀಡುವಂತೆ ಡಿ.ಕೆ.ಶಿವಕುಮಾರ್ ಬಣ ಕೂಡ ಶಾಸಕಾಂಗ ಸಭೆಗೆ ಸಹಮತ ವ್ಯಕ್ತಪಡಿಸಲು ತಯಾರಾಗಿದೆ ಎನ್ನಲಾಗುತ್ತಿದೆ. ಈ ನಿಟ್ಟಿನಲ್ಲಿ ಬಣ ರಾಜಕೀಯಗಳು ಹೆಚ್ಚಾಗುತ್ತಿವೆ. ಶಾಸಕರ ವಿಶ್ವಾಸಗಳಿಸಲು ಡಿ.ಕೆ.ಶಿವಕುಮಾರ್ ಅವರು ನಯ-ವಿನಯದ ನಡೆಯನ್ನು ಅನುಸರಿಸುತ್ತಿದ್ದಾರೆ.

ಸದ್ಯದ ಪರಿಸ್ಥಿತಿಯಲ್ಲಿ ಕೆಲವು ಶಾಸಕರು ಮಾತ್ರ ಡಿ.ಕೆ.ಶಿವಕುಮಾರ್ ಪರವಾಗಿ ಬಹಿರಂಗವಾಗಿ ಮಾತನಾಡುತ್ತಿದ್ದಾರೆ. ಈ ಸಂಖ್ಯೆಯನ್ನು ಹೆಚ್ಚಿಸಲು ಶಾಸಕರನ್ನು ಸೆಳೆಯುವ ಕಾರ್ಯತಂತ್ರವನ್ನು ಡಿ.ಕೆ. ಬಣ ಆರಂಭಿಸಿದೆ. ಇದಕ್ಕೆ ಪ್ರತಿಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರಗಳ ಮೂಲಕ ಜಾತಿವಾರು ಸಭೆಗಳನ್ನು ನಡೆಸಿ ತಿರುಗೇಟು ನೀಡಲು ಪ್ರಯತ್ನಿಸುತ್ತಿದ್ದಾರೆ. ಬೆಳಗಾವಿಯಲ್ಲಿ ವಿಧಾನಸಭೆಯ ಅಧಿವೇಶನದ ನಡುವೆಯೇ ರಾಜಕೀಯವೂ ಕೂಡ ಕಾವು ಪಡೆದುಕೊಳ್ಳುತ್ತಿದೆ.

# ರಾಜ್ಯದಲ್ಲಿ ಕನ್ನಡ ನಾಮಫಲಕ ಕಡ್ಡಾಯ



**ಬೆಳಗಾವಿ,ಡಿ.12–** ವಾಣಿಜ್ಯ , ಕೈಗಾರಿಕೆ, ಟ್ರಸ್ಟ್, ಆಸ್ಪತ್ರೆ, ಮನರಂಜನಾ ಕೇಂದ್ರ, ಹೋಟೆಲ್ ಸೇರಿದಂತೆ ಮತ್ತಿತರ ಕಡೆ ಕನ್ನಡ ಭಾಷೆಯ ಕಡ್ಡಾಯ ನಾಮಫಲಕ ಅನುಷ್ಠಾನಗೊಳಿಸುವ ನಿಯಮವನ್ನು 15 ದಿನಗಳಿಂದ 1 ತಿಂಗಳೊಳಗೆ ರಾಜ್ಯಾದ್ಯಂತ ಕಡ್ಡಾಯ ಮಾಡುವುದಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ವಿಧಾನಪರಿಷತ್‌ನಲ್ಲಿ ಸದಸ್ಯೆ ಉಮಾಶ್ರೀ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಕನ್ನಡ ಕಡ್ಡಾಯ ನಾಮಫಲಕ ಅನುಷ್ಠಾನ ಸಂಬಂಧ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಗೆ ರೀತಿ ನಿಯಮಗಳನ್ನು ರೂಪಿಸಿ ಕಳುಹಿಸಿಕೊಟ್ಟಿದ್ದೇವೆ. 15 ದಿನಗಳಿಂದ ಒಂದು ತಿಂಗಳೊಳಗೆ ಇದು ಪೂರ್ಣಗೊಳ್ಳಬಹುದು.

ನಂತರ ರಾಜ್ಯಾದ್ಯಂತ ಆದೇಶ ಹೊರಬೀಳಲಿದೆ ಎಂದು ತಿಳಿಸಿದರು.ಕನ್ನಡ ಕಡ್ಡಾಯ ನಾಮಫಲಕ ಅಭಿಯಾನವು ಅನೇಕ ಜಿಲ್ಲೆಗಳಲ್ಲಿ ಯಶಸ್ವಿಯಾಗಿದೆ. 11 ಜಿಲ್ಲೆಗಳಲ್ಲಿ ನೂರಕ್ಕೆ ನೂರರಷ್ಟು ಅನುಷ್ಠಾನವಾಗಿದ್ದರೆ, ಕೆಲವು ಜಿಲ್ಲೆಗಳಲ್ಲಿ, ಶೇ. 80, 85, 90ರಷ್ಟು ಅನುಷ್ಠಾನವಾಗಿದೆ.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕಡ್ಡಾಯ ಮಾಡಲು ಈ ನಿಯಮವನ್ನು ಜಾರಿ ಮಾಡುತ್ತೇವೆ ಎಂದರು.ನಮ ರಾಜ್ಯದಲ್ಲಿ ಕನ್ನಡ ಕಡ್ಡಾಯ ಆಗಬೇಕೆಂಬುದರಲ್ಲಿ ಎರಡು ಮಾತಿಲ್ಲ. ಇದಕ್ಕಾಗಿಯೇ ರಾಜ್ಯಮಟ್ಟದ ಸಮಿತಿಯನ್ನು ರಚಿಸಿದ್ದೇವೆ. ಇದರಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಇರುತ್ತಾರೆ. ಅದೇ ರೀತಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ಮಾಡಿದ್ದೇವೆ. ಕನ್ನಡವನ್ನು ಕಡ್ಡಾಯಗೊಳಿಸಬೇಕೆಂಬ ಸರ್ಕಾರದ ನಿಲುವಿನಲ್ಲಿ ರಾಜೀಯಾಗುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.

31 ಜಿಲ್ಲೆಗಳಲ್ಲಿ ವಿಚಕ್ಷಣ ದಳ : ಬೆಂಗಳೂರಿನಲ್ಲಿ 8 ವಲಯಗಳನ್ನು ಸ್ಥಾಪನೆ ಮಾಡಿದ್ದೇವೆ. ಇದಕ್ಕಾಗಿ ವಿಚಕ್ಷಣ ದಳವನ್ನು ಸಹ ಸ್ಥಾಪನೆ ಮಾಡಲಿದ್ದೇವೆ. ಹೊರಗುತ್ತಿಗೆ ಆಧಾರದ ಮೇಲೆ ವಾಹನಗಳನ್ನು ಖರೀದಿ ಮಾಡಲಿದ್ದೇವೆ. ಈಗಾಗಲೇ ಕಚೇರಿ ಕೂಡ ಆರಂಭವಾಗಿದೆ.

ಸಮಿತಿ ಕೆಲವು ಕಾರಣಗಳಿಂದ ವಿಳಂಬವಾಗಿದೆ ಎಂಬುದನ್ನು ಒಪ್ಪಿಕೊಂಡರು.ಕನ್ನಡ ನಾಮಫಲಕ ಹಾಕದೇ ಇದ್ದರೆ, ಮೊದಲ ಅಪರಾಧಕ್ಕಾಗಿ 5 ಸಾವಿರ ದಂಡ ಹಾಕುತ್ತೇವೆ. ಎರಡನೇ ಅಪರಾಧಕ್ಕೆ 10 ಸಾವಿರ ಹಾಗೂ ಪ್ರತಿ ಅಪರಾಧಕ್ಕೆ 20 ಸಾವಿರ ವಿಸ್ತರಿಸಬಹುದಾಗಿದೆ. 60:40 ಅನುಪಾತದಲ್ಲಿ ಕನ್ನಡ ಬೋರ್ಡ್ ಹಾಕಬೇಕು. ಜಿಲ್ಲಾಧಿಕಾರಿಗಳಿಗೆ ಸೂಚನೆ ಸಹ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

# ಸಾರ್ವತ್ರಿಕ ಆರೋಗ್ಯ ರಕ್ಷಣೆ ದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ

ಧೈರ್ಯದ ದಾರಿ

**ಸಿಂಧನೂರು: ಡಿ 12–** ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ಸನ್‌ರೈಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್ಸ್ (ಡಿ. ಫಾರ್ಮಸಿ, ನರ್ಸಿಂಗ್, ಪ್ಯಾರಾಮೆಡಿಕಲ್ ಕಾಲೇಜು) ಹಾಗೂ ತಾಲೂಕು ಆರೋಗ್ಯ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಸಾರ್ವತ್ರಿಕ ಆರೋಗ್ಯ ರಕ್ಷಣೆ ದಿನದ ಕಾನೂನು ಅರಿವು ನೆರವು ಕಾರ್ಯಕ್ರಮವನ್ನುವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ ಸನ್ಮಾನ್ಯ ನ್ಯಾಯಾಧೀಶರು ಶ್ರೀಮತಿ ರೂಪ, ಪ್ರಧಾನ ಸಿವಿಲ್ ನ್ಯಾಯಾಧೀಶರು, ಹಾಗೂ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಕೆ. ಭೀಮನಗೌಡ ಅಧ್ಯಕ್ಷರು ತಾಲೂಕು ನ್ಯಾಯವಾದಿಗಳ ಸಂಘ ಸಿಂಧನೂರು ಹಾಗೂ ಎಲ್ಲಾ ಮುಖ್ಯ ಅತಿಥಿಗಳಿಗೆ ಪುಷ್ಪಾರ್ಚನೆ ಮೂಲಕ ಆತ್ಮೀಯ ಸ್ವಾಗತ ನೀಡಲಾಯಿತು.

ಉದ್ಘಾಟನಾ ಕಾರ್ಯಕ್ರಮದಲ್ಲಿ ಗಿಡಕ್ಕೆ ನೀರು ಹಾಕುವ ಮೂಲಕ ಆರೋಗ್ಯ ದಿನದ ಕಾರ್ಯಕ್ರಮಕ್ಕೆ ಸಂಕೇತಾತ್ಮಕ ಆರಂಭ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ರೂಪ ಅವರು, "ದೇವರು ಪ್ರತಿಯೊಬ್ಬರಿಗೂ ನೀಡಿರುವ ದೇಹವನ್ನು ಸರಿಯಾದ ಕ್ರಮಗಳು, ನಿಯಮಿತ ವ್ಯಾಯಾಮ ಹಾಗೂ ಆರೋಗ್ಯಕರ ಜೀವನಶೈಲಿಯಿಂದ ಕಾಪಾಡಿಕೊಂಡಾಗ ಮಾತ್ರ 'ಆರೋಗ್ಯವೇ ಭಾಗ್ಯ' ಎಂಬ ನುಡಿ ಸಾರ್ಥಕವಾಗುತ್ತದೆ" ಎಂದು ತಿಳಿಸಿದರು.

ಅಧ್ಯಕ್ಷೀಯ ಭಾಷಣದಲ್ಲಿ ಶ್ರೀ ಕೆ. ಭೀಮನಗೌಡ ವಕೀಲರು

ದಿನದ 24 ಗಂಟೆಗಳನ್ನು ಸರಿಯಾಗಿ ಮೂರು ಭಾಗಗಳಾಗಿ ಹಂಚಿಕೊಂಡು ಕೆಲಸ, ವಿಶ್ರಾಂತಿ ಮತ್ತು ಕುಟುಂಬದೊಂದಿಗೆ ಗುಣಮಟ್ಟದ ಸಮಯ ಕಳೆಯುವ ಮೂಲಕ ಶಾರೀರಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಶ್ರೀ ವಿಜಯಚಂದ್ರ ಪ್ರಭು ಬಿ, ಸಹಾಯಕ ಸರಕಾರಿ ಅಭಿಯೋಜಕರು, ಆರೋಗ್ಯ ಕಾರ್ಯಕರ್ತರ ಹಕ್ಕು ರಕ್ಷಣೆ ಹಾಗೂ ಕಾನೂನು ಪ್ರೊವಿಷನ್ಸ್ ಕುರಿತು ಮಾಹಿತಿ ನೀಡಿ,



ಗುಣಮಟ್ಟದ ಸಾರ್ವಜನಿಕ ಆರೋಗ್ಯ ಸೇವೆಯನ್ನು ನಿಷ್ಠೆಯಿಂದ ಒದಗಿಸುವ ಅಗತ್ಯವನ್ನು ವಿವರಿಸಿದರು. ಶೇಖರಪ್ಪ ಗಡೆದ್, ಖಜಾಂಚಿ ತಾಲೂಕು ನ್ಯಾಯವಾದಿಗಳ ಸಂಘ, ಇವರು ಮಾತನಾಡಿ "ಸಾಲವಿಲ್ಲದವನೂ, ಆರೋಗ್ಯವಂತನೂ ಆದವನೇ ನಿಜವಾದ ಶ್ರೀಮಂತ" ಎಂದು ಆರೋಗ್ಯದ ಮಹತ್ವವನ್ನು ಒತ್ತಿಹೇಳಿದರು,ಮುಖ್ಯ ಉಪನ್ಯಾಸಕರಾಗಿ ಆಗಮಿಸಿದ ಗೀತಾ ಹಿರೇಮಠ, ಕ್ಷೇತ್ರ ಆರೋಗ್ಯ ಶಿಕ್ಷಣ ಅಧಿಕಾರಿ, ತಾಯಿ ಮಗು ಆರೋಗ್ಯ, ನವಜಾತ ಶಿಶು ಆರೋಗ್ಯ, ಲಸಿಕಾ ಕಾರ್ಯಕ್ರಮ, ಕುಷ್ಠರೋಗ ನಿರ್ಮೂಲನೆ, ಇಂದ್ರಧನುಷ್, ಬಾಯಿ ಆರೋಗ್ಯ ಸೇರಿದಂತೆ ಅನೇಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಪ್ರಬೋಧನಾತ್ಮಕ ಉಪನ್ಯಾಸ ನೀಡಿ ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಮೂಡಿಸಿದರು, ಕಾರ್ಯಕ್ರಮದಲ್ಲಿ ಶ್ರೀ ಲಾಜರ್ ಸಿರಿಲ್ ಜಿ, ನರ್ಸಿಂಗ್ ಪ್ರಾಚಾರ್ಯರು, ಆರೋಗ್ಯ ಸರ್ಕಾರಿ ಯೋಜನೆಗಳಾದ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ, ಅನೀಮಿಯಾ ಮುಕ್ತ ಭಾರತ, ಆರ್.ಬಿ.ಎಸ್.ಕೆ, ಜೆ.ಎಸ್.ಎಸ್.ವೈ, ಪಿ.ಎಂ.ಎಂ.ಎಸ್.ವೈ, ಕಾಯಕಲ್ಪ, ಲಕ್ಷ್ಯ ಹಾಗೂ ಸಾಂಕ್ರಾಮಿಕ ಅಸಾಂಕ್ರಾಮಿಕ ರೋಗ ತಡೆ ಕಾರ್ಯಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ಸಮಗ್ರ ಮಾಹಿತಿ ನೀಡಿದರು. ಕಾರ್ಯಕ್ರಮದ ಕುರಿತು ತಯಾರಿಸಲಾದ ಆರೋಗ್ಯ ಜಾಗೃತಿ ಫಲಕ ಮತ್ತು ರಂಗೋಲಿಗಳನ್ನು ಪ್ರಧಾನ ನ್ಯಾಯಾಧೀಶರು, ಕಾರ್ಯಕ್ರಮದ ಅಧ್ಯಕ್ಷರಾದ ಭೀಮನಗೌಡರು ಹಾಗೂ ಎಲ್ಲಾ ಗಣ್ಯರು ವೀಕ್ಷಿಸಿ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಸನ್ಮಾನ್ಯ ನ್ಯಾಯಾಧೀಶರು ರೂಪ ಕೆ. ಭೀಮನಗೌಡ ಅಧ್ಯಕ್ಷ, ತಾಲೂಕು ನ್ಯಾಯವಾದಿಗಳ ಸಂಘ ಹಿರಿಯ ವಕೀಲರು ಖಾಜಿ ಮಲಿಕ್ ಸಹಾಯಕ ಸರಕಾರಿ ಅಭಿಯೋಜಕರು ಶ್ರೀ ವಿಜಯಚಂದ್ರ ಪ್ರಭು ಬಿ ಖಜಾಂಚಿ ಶ್ರೀ ಶೇಖರಪ್ಪ ಗಡೆದ್ ತಾಲೂಕು ನ್ಯಾಯವಾದಿಗಳ ಸಂಘ ಸಿಂಧನೂರು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ ಸನ್‌ರೈಸ್ ಗ್ರೂಪ್ ಆಫ್ ಇನ್ಸ್ಟಿಟ್ಯೂಶನ್ ಕಾರ್ಯದರ್ಶಿ ಇರ್ಷಾದ್ ಕೆ. ಅತ್ತಾರ್ ಆಡಳಿತ ಮಂಡಳಿ ಸದಸ್ಯ ಆಸಿಫ್ ಪ್ರಾಚಾರ್ಯರಾದ ಚಕ್ರವರ್ತಿ, ವಾಸಿಂ ಹುಸೇನ್‌ನರ್ಸಿಂಗ್ ಪ್ರಾಚಾರ್ಯ ಲಾಜರ್ ಸಿರಿಲ್ ಉಪನ್ಯಾಸಕರು: ಆಶು ಪಾಷ, ರಾಜೇಶ್, ವೀರೇಶ್, ಕುಮಾರಿ ಶೋಭಾ, ಕುಮಾರಿ ವೀರೇಶ್ವರಿ, ಶ್ರೀಮತಿ ರಾಧಿಕಾ, ಕುಮಾರಿ ಚೈತ್ರ,ಎಲ್ಲಾ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE